EMAIL : dairyadadaari@gmail.com ಸಂಪುಟ: 01 ಸಂಚಿಕೆ: 75
ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಬುಧವಾರ: 25–02–2026

**SEHRI & IFTARI TIME**
DAY : WEDNESDAY
RAMZAN : 07
DATE: 25.02.2026
END TIME OF SEHRI :5:25 AM
FAJAR AZAAN : 5:30 AM

IFTAR TIME : 6:29 PM



ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ ದಿನಪತ್ರಿಕೆ

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ರಾಜ್ಯದಲ್ಲಿ ಉದ್ಯೋಗಕ್ಕಾಗಿ ದಂಗೆ ಎದ್ದ ವಿದ್ಯಾರ್ಥಿ ಸಂಘಟನೆಗಳು, ಧಾರವಾಡದಲ್ಲಿ ಭಾರಿ ಪ್ರತಿಭಟನೆ

**ಬೆಂಗಳೂರು,ಫೆ.24–**ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಶೀಘ್ರವಾಗಿ ಭರ್ತಿ ಮಾಡಬೇಕೆಂದು ಒತ್ತಾಯಿಸಿ ಧಾರವಾಡದಲ್ಲಿ ಅಖಿಲ ಕರ್ನಾಟಕ ರಾಜ್ಯ ವಿದ್ಯಾರ್ಥಿ ಸಂಘಟನೆಗಳ ನೇತೃತ್ವದಲ್ಲಿ ನಡೆದ ಬೃಹತ್ ಪ್ರತಿಭಟನೆ ವೇಳೆ ಯುವ ಸಮುದಾ ಯವನ್ನು ನಿರ್ಲಕ್ಷಿಸಿದರೆ ಜೋಕೆ! ಎಂದು ಎಚ್ಚರಿಕೆ ಸಂದೇಶವನ್ನು ಸರ್ಕಾರಕ್ಕೆ ರವಾನಿಸ ಲಾಯಿತು.

ಅಖಿಲ ಕರ್ನಾಟಕ ರಾಜ್ಯ ವಿದ್ಯಾರ್ಥಿ ಸಂಘಟನೆ ಮತ್ತು ವಿವಿಧ ಸಂಘಟನೆಗಳ ನೇತೃತ್ವದಲ್ಲಿ ನಡೆದ ಬೃಹತ್ ಪ್ರತಿಭಟನೆಗೆ ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಉದ್ಯೋಗಾಕಾಂಕ್ಷಿಗಳು ಆಗಮಿಸಿ ಸರ್ಕಾರಕ್ಕೆ ಬಿಸಿ ಮುಟ್ಟಿಸಿದರು.

ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್, ಉಪನಾಯಕ ಅರವಿಂದ ಬೆಲ್ಲದ್, ವಿಧಾನಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಹಲವು ಬಿಜೆಪಿ ನಾಯಕರು ಪ್ರತಿಭಟನೆಗೆ ಬೆಂಬಲ ನೀಡಿದರು. ನಗರದ ಶ್ರೀನಗರ ವೃತ್ತದಿಂದ ಆರಂಭವಾದ ಪ್ರತಿಭಟನೆ ಮಧ್ಯಭಾಗದಲ್ಲಿ



ಹಾದುಬರುತ್ತಿದ್ದಂತೆ ಅವರನ್ನು ಡೆಯಲು ಯತ್ನಿಸಿದಾಗ ಪೊಲೀಸರು ಮತ್ತು ವಿದ್ಯಾರ್ಥಿಗಳ ನಡುವೆ ತಳ್ಳಾಟ, ನೂಕಾಟ, ಆರೋಪ–ಪ್ರತ್ಯಾರೋಪಗಳು ನಡೆದವು.

ಧಾರವಾಡ ಜಿಲ್ಲಾಧಿಕಾರಿ ಪ್ರಭುಲಿಂಗ ಕವಲಿಕಟ್ಟಿ ಸ್ಥಳಕ್ಕೆ ಬಂದು ಪ್ರತಿಭಟನಾನಿರತ ವಿದ್ಯಾರ್ಥಿಗಳ ಮನವೊಲಿಸಲು ಹರಸಾಹಸಪಟ್ಟರು. ಒಂದು ಹಂತದಲ್ಲಿ ತಾಳೆ ಕಳೆದುಕೊಂಡ ವಿದ್ಯಾರ್ಥಿಗಳು ಹುಬ್ಬಳ್ಳಿ ಧಾರವಾಡ ನಗರ ಪೊಲೀಸ್ ಆಯುಕ್ತ ಶಶಿಕುಮಾರ್ ಜೊತೆ ಭಾರೀ ಮಾತಿನ ಚಕಮಕಿ ನಡೆಸಿ ವಿದ್ಯಾರ್ಥಿಗಳನ್ನು ಬಂಧಿಸಿದರೆ ಸುಮನಿರುವುದಿಲ್ಲ ಎಂದು ಎಚ್ಚರಿಕೆ ಕೊಟ್ಟರು. ಈ ಹಂತದಲ್ಲಿ ಸಂಘಟನೆ ಅಧ್ಯಕ್ಷ ಕಾಂತಕುಮಾರ್ ಸೇರಿದಂತೆ ಕೆಲವು ವಿದ್ಯಾರ್ಥಿಗಳನ್ನು ಬಂಧಿಸಲು ಮುಂದಾದಾಗ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿತ್ತು. ಧಾರವಾಡದ ಜ್ಯುಬಿಲಿ ವೃತ್ತದಲ್ಲಿ ಸಾವಿರಾರು ವಿದ್ಯಾರ್ಥಿಗಳು ಜಮಾವಣೆಗೊಂಡಿದ್ದರಿಂದ ಅವರನ್ನು ನಿಯಂತ್ರಿಸಲು ಪೊಲೀಸರು ಹರಸಾಹಸಪಡಬೇಕಾಯಿತು.

ಈ ಸಂದರ್ಭದಲ್ಲಿ ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದ ಪಿಎಸ್ಐ ಸುನೀಲ್ ಅವರನ್ನು ತಲ್ಲಾಳಿಡಿದ್ದರಿಂದ ಅವರಿಗೆ ಸಣ್ಣಪುಟ್ಟ ಗಾಯಗಳಾದವು. ಸ್ಥಳಕ್ಕೆ ಪೊಲೀಸ್ ಆಯುಕ್ತ ಎನ್.ಶಶಿಕುಮಾರ್ ಭೇಟಿ ನೀಡಿ ಪ್ರತಿಭಟನಾನಿರತ ವಿದ್ಯಾರ್ಥಿಗಳು ಹಾಗೂ ಉದ್ಯೋಗಾಕಾಂಕ್ಷಿಗಳಿಗೆ ಮನವೊಲಿಸಲು ಯತ್ನಿಸಿದ ಘಟನೆಯೂ ನಡೆಯಿತು. 2ನೇಪುಟಕ್ಕೆ

## ಶಿಕ್ಷಣದ ಜೊತೆಗೆ ಪ್ರವಾಸವು ಜ್ಞಾನಾರ್ಜನೆಗೆ ಪೂರಕ: ಶಾಸಕ ಜಿ. ಹಂಪಯ್ಯ ನಾಯಕ

ಧೈರ್ಯದ ದಾರಿ




**ಸಿರವಾರ:** "ವಿದ್ಯಾರ್ಥಿಗಳಿಗೆ ಕೇವಲ ಪಠ್ಯದ ಶಿಕ್ಷಣವಷ್ಟೇ ಅಲ್ಲದೆ, ಪ್ರೇಕ್ಷಣೀಯ ಸ್ಥಳಗಳ ಪರಿಚಯಿಸುವ ಪ್ರವಾಸವೂ ಅಷ್ಟೇ ಅವಶ್ಯಕವಾಗಿದೆ," ಎಂದು ಮಾನ್ವಿ ಕ್ಷೇತ್ರದ ಶಾಸಕ ಜಿ. ಹಂಪಯ್ಯ ನಾಯಕ ಅವರು ಅಭಿಪ್ರಾಯಪಟ್ಟರು.
ಪಟ್ಟಣದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಇಂದು ಹಮ್ಮಿಕೊಂಡಿದ್ದ 'ಕರ್ನಾಟಕ ದರ್ಶನ ಭಾಗ್ಯ' ಪ್ರವಾಸ ಕಾರ್ಯಕ್ರಮಕ್ಕೆ ಹಸಿರು ಬಾವುಟ ತೋರುವ ಮೂಲಕ ಅವರು ಚಾಲನೆ ನೀಡಿ ಮಾತನಾಡಿದರು.
ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ
ನಮ್ಮ ಸರ್ಕಾರವು ಎಸ್‌ಸಿ ಮತ್ತು ಎಸ್‌ಟಿ ವಿದ್ಯಾರ್ಥಿಗಳ ಜ್ಞಾನಾರ್ಜನೆಗಾಗಿ ಐದು ದಿನಗಳ ಕಾಲ 'ಕರ್ನಾಟಕ ದರ್ಶನ' ಪ್ರವಾಸವನ್ನು ಆಯೋಜಿಸಿದೆ. ಈ ಪ್ರವಾಸದಲ್ಲಿ ವಿದ್ಯಾರ್ಥಿಗಳು ಹಂಪಿ, ಹೊಸಪೇಟೆ ಸೇರಿದಂತೆ ರಾಜ್ಯದ ವಿವಿಧ ಐತಿಹಾಸಿಕ ಹಾಗೂ ಪ್ರೇಕ್ಷಣೀಯ ಸ್ಥಳಗಳನ್ನು ಸಂದರ್ಶಿಸಲಿದ್ದಾರೆ. "ವಿದ್ಯಾರ್ಥಿಗಳು ಈ ಪ್ರವಾಸದ ಸದುಪಯೋಗ ಪಡೆದುಕೊಂಡು, ಸುರಕ್ಷಿತವಾಗಿ ಮತ್ತು ಆರೋಗ್ಯವಾಗಿ ಮರಳಿ ಬರಲಿ," ಎಂದು ಶಾಸಕರು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ವೇದಿಕೆಯ ಮೇಲೆ ಪ್ರಮುಖ ಗಣ್ಯರು ಉಪಸ್ಥಿತರಿದ್ದರು:

**ಪಟ್ಟಣ ಪಂಚಾಯಿತಿ:** ಅಧ್ಯಕ್ಷರಾದ ಹಾಜಿ ಚೌದ್ರಿ, ಸದಸ್ಯರಾದ ಸೂರಿ, ದುರ್ಗಣ್ಣ ನಾಯಕ, ಆರಿಫ್ ಮಿಯಾ ಚಾಗ್ಬಾವಿ, ಮೌನೇಶ್ ಅಣಗಿ, ಚನ್ನಬಸವ ನಾಯಕ, ಗಡ ಮಾರ್ಕಪ್ಪ, ರಂಗನಾಥ್ ಬೋವಿ.
**ಶಿಕ್ಷಣ ಇಲಾಖೆ:** ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್ ದೊಡ್ಡಮನಿ, ಸಿಆರ್‌ಸಿ ಮಹೇಶ್.
**ಮುಖಂಡರು:** ಮಾಜಿ ತಾ.ಪಂ. ಅಧ್ಯಕ್ಷ ದಾನನ ಗೌಡ, ಶ್ರೀಧರ್ ಸ್ವಾಮಿ, ಕಲ್ಲೂರು ಬಸವರಾಜ್ ನಾಯಕ, ಎಚ್.ಕೆ. ಅಂಬರೀಶ್, ವೀರೇಶ್ ಗಣೇಕಲ್, ಸಾಹುಕಾರ್ ರಂಗನಾಥ್ ನಾಯಕ್, ದಿವಾಕರ್ ಅಬ್ರಾಮ್ ಹೊನ್ನಟ್ಟಿಗಿ, ಡಿ. ಜಯಪ್ಪ, ಮಲ್ಲಿಕಾರ್ಜುನ್ ಮಲ್ಲಟ, ಮಾಜಿ ಸದಸ್ಯರಾದ ಮಲ್ಲಪ್ಪ ಎನ್., ಪಾಷಾ ಬಡೇಗರ್, ಡಿ. ಯಮನೂರು.
ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ ಹಾಗೂ ನೂರಾರು ವಿದ್ಯಾರ್ಥಿಗಳು ಈ ಸಂಭ್ರಮದ ಕ್ಷಣಕ್ಕೆ ಸಾಕ್ಷಿಯಾದರು.

## ಭೋವಿ ಸಮುದಾಯದವರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು: ನಿಗಮದ ರಾಜ್ಯಾಧ್ಯಕ್ಷ ಎಂ ರಾಮಪ್ಪ ಸಲಹೆ



ಧೈರ್ಯದ ದಾರಿ

**ರಾಯಚೂರು ಫೆ,24–** ಶಿಕ್ಷಣ ಪಡೆದಾಗ ಮಾತ್ರ ನಾವು ಆರ್ಥಿಕ, ಸಾಮಾಜಿಕ ಹಾಗೂ ರಾಜಕೀಯವಾಗಿ ಅಭಿವೃದ್ಧಿ ಹೊಂದಲು ಸಾಧ್ಯ. ಶಿಕ್ಷಣದಿಂದ ಮಾತ್ರ ಎಲ್ಲ ಸ್ಥಾನಮಾನಗಳು ಲಭ್ಯವಾಗಲಿದ್ದು, ಭೋವಿ ಸಮುದಾಯದ ಪ್ರತಿಯೊಬ್ಬರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ರಾಮಪ್ಪ ಅವರು ಹೇಳಿದರು.
ಫೆ.24ರ ಮಂಗಳವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಮತ್ತು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಭೋವಿ ನಿಗಮದ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಹಾಗೂ ಸಮುದಾಯದ ಮುಖಂಡರೊಂದಿಗೆ ಸಮಾಲೋಚನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ತಿಳಿವಳಿಕೆ ಮತ್ತು ವಿಚಾರದಿಂದಲೇ ನನಗೆ ಜೀವನದಲ್ಲಿ ಎಲ್ಲ ಅವಕಾಶಗಳನ್ನು ಪಡೆಯಲು ಸಾಧ್ಯವಾಗಿದೆ. ಆ ತಿಳಿವಳಿಕೆಯು ಶಿಕ್ಷಣದಿಂದಲೇ ಬಂದಿದೆ. ಆದ್ದರಿಂದ ನಮ್ಮ ಬದಲಾವಣೆಗೆ ಶಿಕ್ಷಣವೊಂದೇ ದಾರಿಯಾಗಿದೆ. ಈ ಭಾಗದಲ್ಲಿ ಶಿಕ್ಷಣದ ಪ್ರಮಾಣದ ಕಡಿಮೆ ಇದೆ. ಸಮಾಜದ ಮುಖಂಡರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಲು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ತಿಳಿಸಿದರು. ನಾನು ಬಡತನದ ಕುಟುಂಬದಿಂದ ಬಂದಿದ್ದೇನೆ. ಬಡವ ಕಷ್ಟಗಳಿಗೆ ಯಾವ ರೀತಿಯಲ್ಲಿ ಸ್ಪಂದಿಸಬೇಕೆಂಬುದು ಗೊತ್ತಿದೆ. ಯಾರೇ ಆಗಲಿ ಯಾವುದೇ ವೇಳೆಯಲ್ಲಿ ಕರೆ ಮಾಡಿದರೂ ಸ್ವೀಕರಿಸಿ ಮಾತನಾಡುತ್ತೇನೆ. ಸಮಾಜದ ವಿದ್ಯಾರ್ಥಿಗಳಿಗೆ ಕಾಲೇಜು ಹಾಗೂ ವಸತಿ ಪ್ರವೇಶಕ್ಕಾಗಿ ಜನಸಾಮಾನ್ಯರು ಯಾವುದೇ ಸಮಯದಲ್ಲಿ ಸಹ ಸಂಪರ್ಕ ಮಾಡಬಹುದಾಗಿದೆ ಎಂದರು.
ಉತ್ತರ ಕರ್ನಾಟಕದ ಜಿಲ್ಲೆಗಳಿಂದ ಭೋವಿ ಅಭಿವೃದ್ಧಿ ನಿಗಮದ ಮೇಲೆ ಹೆಚ್ಚಿನ ನಿರೀಕ್ಷೆ ಇದೆ. ನಾನು ಅವರಿಗೆ ಸುಳ್ಳು ಭರವಸೆಗಳನ್ನು ನೀಡುವುದಿಲ್ಲ. ನನ್ನ ಕಡೆಯಿಂದ ಎಷ್ಟು ಸಾಧ್ಯವೋ ಅಷ್ಟು ಕೆಲಸಗಳನ್ನು ಅರ್ಹರಿಗೆ ತಲುಪಿಸಲು ಶ್ರಮಿಸುತ್ತೇನೆ ಎಂದರು.
ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಭೋವಿ ಅಭಿವೃದ್ಧಿ ನಿಗಮಕ್ಕೆ ಅನೇಕ ಕಾರ್ಯಕ್ರಮಗಳನ್ನು ನೀಡಿದ್ದಾರೆ. ಅವುಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದ್ದು, ಕಟ್ಟಕಡೆಯ ವ್ಯಕ್ತಿಗೂ ಕಾರ್ಯಕ್ರಮದ ಲಾಭವನ್ನು ತಲುಪಿಸಲಾಗುತ್ತದೆ ಎಂದರು.
ಅಧಿಕಾರಿಗಳಿಗೆ ಸೂಚನೆ: ಸಮಾರಂಭದಲ್ಲಿ ಪ್ರಾತ್ಯಕ್ಷಿಕೆ ಮೂಲಕ ಭೋವಿ ನಿಗಮದ ಸಮಗ್ರ ಯೋಜನೆಗಳ ಬಗ್ಗೆ ಸವಿಸ್ತರವಾಗಿ ತಿಳಿಸಲಾಯಿತು. ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಚಂದ್ರು ನಾಯ್ಕ್ ಯು ಅವರು ಆಯಾ ಯೋಜನೆಗಳ ಬಗ್ಗೆ ಸಮಾರಂಭದಲ್ಲಿ ವಿವರಿಸಿದರು. ಸಭೆಯಲ್ಲಿ ಚರ್ಚೆಯಾಗುವ ಎಲ್ಲ 2ನೇಪುಟಕ್ಕೆ►

## ಅತ್ತಾಗ ಸಂತೈಸೋಕೆ ನಕ್ಕಾಗ ಜೊತೆಯಾಗೋಕೆ ಸ್ನೇಹಿತರು ಬೇಕೆ ಬೇಕು – ರಮೇಶಬಾಬು ಯಾಳಗಿ




ಧೈರ್ಯದ ದಾರಿ

**ಮಾನ್ವಿ–** ಈ ಜಗತ್ತಿನಲ್ಲಿ ಬೀಸುವ ತಂಗಾಳಿ ಎಂದರೆ ಸ್ನೇಹ ಒಂದೆ.ಎಂಥಹ ಸಮಯದಲ್ಲೂ ನಾನಿದ್ದೇನೆ ನಿಂಜೊತೆ ಅನ್ನೋಕೆ ನೋವಿನಿಂದ ಅತ್ತಾಗ ಸಂತೈಸಲು ನಲಿವಿನಿಂದ ನಕ್ಕಾಗ ಜೊತೆಯಾಗಿರಲು ಸ್ನೇಹಿತರು ಬೇಕೇ ಬೇಕು ಎಂದು ಸಾಹಿತಿ,ವಾಗ್ಮಿ ರಮೇಶಬಾಬು ಯಾಳಗಿ ಹೇಳಿದರು

ಅವರು ತಾಲೂಕಿನ ಜಾಗಿರಪನ್ನೂರು ಗ್ರಾಮದ ಲೋಯೋಲಾ ಕಪೆಪಲಾಡಿ ಶಾಲೆಯಲ್ಲಿ ಆಯೋಜಿಸಿದ್ದ ಹಳೆಯ ವಿದ್ಯಾರ್ಥಿಗಳ ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

ಪ್ರೀತಿಯಲ್ಲಿ ಹಲವು ಸಲ ಸ್ವಾರ್ಥ ಸುಖದ ವಿರಸ ಎದ್ದು ಕಾಣುತ್ತೇವೆ ಆದರೆ ಸ್ನೇಹದಲ್ಲಿ ಯಾವಾಗಲೂ ಸಮರಸಭಾವದ ನಿಸ್ವಾರ್ಥತತೆ ಇರುತ್ತದೆ.ಕಷ್ಟದ ದಿನಗಳಲ್ಲಿ ಕೈ ಹಿಡಿದು ಮುನ್ನಡೆಸುವ ಸ್ನೇಹಿತರೇ ನಮ್ಮೆಲ್ಲರ ನಿಜವಾದ ಸಂಪತ್ತು.

ಪವಿತ್ರವಾದ ಈ ಸ್ನೇಹದಲ್ಲಿ ಜಾತಿ ಭೇದಭಾವವಿರುವುದಿಲ್ಲ, ಅಂತಸ್ತಿನ ಅಹಂಕಾರ ಕಿಂಚಿತ್ತೂ ಇರುವುದಿಲ್ಲ ಹಣದ ಅಹಂಕಾರದ ಮಾತೇ ಇರುವುದಿಲ್ಲ ಎಂದ ಯಾಳಗಿ ಅವರು ಸಜ್ಜನಿಕೆಯ ಸ್ನೇಹಿತರು ದೇವರು ಕೊಟ್ಟ ವರ ಎಂದರು.ಆದರೂ ಸ್ನೇಹಿತರ ಆಯ್ಕೆಯಲ್ಲಿ ಒಂದಿಷ್ಟು ಜಾಗೃತಿ ವಹಿಸಬೇಕಾದ ಅನಿವಾರ್ಯತೆ ಪ್ರಸ್ತುತ ದಿನಗಳಲ್ಲಿ ಬಂದೊದಗಿದೆ ಎಂದರು.

ಶಾಲೆಯ ನಿರ್ದೇಶಕ ವಂದನೆಯ ಫಾದರ್ ರಾಯಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಶಾಲೆಯ ಸಹಾಯಕ ನಿರ್ದೇಶಕ ವಂದನೆಯ ಫಾದರ್ ಬರ್ತಾಲೋಮ್ , ಶಾಲೆಯ ಮುಖ್ಯ ಗುರುಗಳಾದ ಸಿಸ್ಟರ್ ಸೆಲಿನಾ ಮೇರಿ, ಕಾರ್ಯಕ್ರಮದ ಸಂಯೋಜಕರಾದ ಶಿಕ್ಷಕ ಮರಿಯಪ್ಪ, ವೀರೇಶ್ ಗೌಡ ವೇದಿಕೆಯಲ್ಲಿ ಉಪಸ್ಥಿತರಿದ್ದರು.
ಸಮಾರಂಭದಲ್ಲಿ ಶಾಲೆಯ ಶಿಕ್ಷಕರು ಮತ್ತು ಶಾಲೆಯ ಹಳೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.
ಅತಿ ಹೆಚ್ಚು ಅಂಕ ಗಳಿಸಿ ಉತ್ತೀರ್ಣರಾದ ಹಳೆಯ ವಿದ್ಯಾರ್ಥಿಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಸರಿತಾ ಶಿಕ್ಷಕಿ ಸ್ವಾಗತಿಸಿದರು, ಮರಿಯಪ್ಪ ಶಿಕ್ಷಕರು ಅತಿಥಿಗಳನ್ನು ಪರಿಚಯಿಸಿದರು.
ವೀರೇಶಗೌಡ ಹಾಗೂ ಆನಂದ ಕಾರ್ಯಕ್ರಮ ನಿರೂಪಿಸಿದರು.
ಶಿಕ್ಷಕಿ ಪ್ರಮೀಳಾ ವಂದಿಸಿದರು.

## ಜೋಳದ ರಾಶಿಗೆ ಬೆಂಕಿ ಬಿದ್ದು ನಷ್ಟಕ್ಕೆ ಒಳಗಾದ ರೈತನ ಜಮೀನಿಗೆ ಭೇಟಿ ನೀಡಿದ ಜೆ.ಡಿಎಸ್. ಮಾಜಿ ಶಾಸಕ ರಾಜಾವೆಂಕಟಪ್ಪನಾಯಕ.



ಧೈರ್ಯದ ದಾರಿ

**ಮಾನ್ವಿ :** ತಾಲೂಕಿನ ಜಾಗೀರಪನ್ನೂರು ಗ್ರಾಮದಲ್ಲಿನ ರೈತ ಯಂಕೋಬರವರ ಜಮೀನಿನಲ್ಲಿ ಹಾಕಲಾದ ಜೋಳದ ರಾಶಿಗೆ ಬೆಂಕಿ ಬಿದ್ದು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿದ್ದು ಸ್ಥಳಕ್ಕೆ ಮಾಜಿ ಶಾಸಕರಾದ ರಾಜಾ ವೆಂಕಟಪ್ಪ ನಾಯಕ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿ ಕಿಡಿಗೇಡಿಗಳು ಬೆಂಕಿ ಹಚ್ಚಿರುವ ಅನುಮಾನವಿದ್ದು ತನಿಖಾಧಿಕಾರಿಗಳು ಸೂಕ್ತವಾದ ತನಿಖೆ ನಡೆಸಿ ಆರೋಪಿಗಳನ್ನು ಪತ್ತೆ ಹಚ್ಚಿ ಕ್ರಮ ಕೈಗೊಳ್ಳಬೇಕು ಹಾಗೂ ಸರ್ಕಾರದಿಂದ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು. ರೈತ ಯಂಕೋಬ ರವರಿಗೆ ಸಾಂತ್ವನ ಹೇಳಿದರು. ಜೆ.ಡಿ.ಎಸ್. ಪಕ್ಷದ ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರ ನಾಯಕ , ಶರಣಪ್ಪ ಗೌಡ ಮದ್ಲಾಪುರ, ಬಾಷಾ ಸಾಬ್, ಪಿ .ರವಿಕುಮಾರ ವಕೀಲರು, ಯಲ್ಲಪ್ಪ ನಾಯಕ ವಕೀಲರು, ಸಂಗನಗೌಡ ಜಾಗೀರಪನ್ನೂರು, ವಿಜಯ್ ನಾಯಕ ಕೊಟ್ನೆಕಲ್, ಖಾಸಿಂ ಸಾಬ್ ಚಿಕಲಪರ್ವಿ, ಬಸವರಾಜ ಸ್ವಾಮಿ ಚೀಕಲಪರ್ವಿ, ಬಸವರಾಜ ಜಾಗೀರಪನ್ನೂರು ಸೇರಿದಂತೆ ಇನ್ನಿತರರು ಇದ್ದರು.

ಮೊದಲನೇ ಪುಟದಿಂದ

# ರಾಜ್ಯದಲ್ಲಿ ಉದ್ಯೋಗಕ್ಕಾಗಿ ದಂಗೆ ಎದ್ದ ವಿದ್ಯಾರ್ಥಿ ಸಂಘಟನೆಗಳು, ಧಾರವಾಡದಲ್ಲಿ ಭಾರಿ ಪ್ರತಿಭಟನೆ

ಸುಮಾರು ಒಂದು ತಾಸಿಗೂ ಹೆಚ್ಚು ಕಾಲ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದ್ದರಿಂದ ಧಾರವಾಡದ ಪ್ರಮುಖ ರಸ್ತೆಗಳಲ್ಲಿ ಗಂಟೆಗಟ್ಟಲೇ ಸಂಚಾರ ದಟ್ಟನೆ ಉಂಟಾಗಿತ್ತು. ಸುಮಾರು ಒಂದು ತಾಸಿಗೂ ಹೆಚ್ಚು ಕಾಲ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದ್ದರಿಂದ ಧಾರವಾಡದ ಪ್ರಮುಖ ರಸ್ತೆಗಳಲ್ಲಿ ಗಂಟೆಗಟ್ಟಲೇ ಸಂಚಾರ ದಟ್ಟನೆ ಉಂಟಾಗಿತ್ತು.ರಾಜ್ಯದಲ್ಲಿ ಒಟ್ಟು 2.84 ಲಕ್ಷ ಹುದ್ದೆಗಳು ಖಾಲಿ ಇದ್ದು, ರಾಜ್ಯ ಆರ್ಥಿಕ ಇಲಾಖೆಯಲ್ಲಿನ 9,536 ಹುದ್ದೆಗಳು ಸೇರಿದಂತೆ ಎಲ್ಲ ಇಲಾಖೆಗಳಲ್ಲೂ ಹುದ್ದೆಗಳು ಖಾಲಿ ಇವೆ.

ಹೀಗಿರುವಾಗ ಹುದ್ದೆಗಳನ್ನು ಭರ್ತಿ ಮಾಡುವಂತೆ ಆಗ್ರಹಿಸಿ ಮತ್ತೊಂದು ಹೋರಾಟಕ್ಕೆ ಕರೆ ನೀಡಲಾಗಿತ್ತು. ಸುಮಾರು 30 ಸಾವಿರ ಉದ್ಯೋಗಾಕಾಂಕ್ಷಿಗಳು ಧರಣಿಗಿಳಿದಿದ್ದರು.ರಾಜ್ಯ ಸರ್ಕಾರದ ಬೇರೆ ಬೇರೆ ಇಲಾಖೆಗಳಲ್ಲಿ ಅನೇಕ ವರ್ಷಗಳಿಂದ ನೇಮಕಾತಿಯೇ ಆಗಿಲ್ಲ. ಸರ್ಕಾರ ನೇಮಕಾತಿ ಮಾಡಿಕೊಂಡು ನಿರುದ್ಯೋಗಿ ಯುವಕರಿಗೆ ಉದ್ಯೋಗ ನೀಡುವ ಮೂಲಕ ನಿರುದ್ಯೋಗವನ್ನು ಹೋಗಲಾಡಿಸಬೇಕು ಎಂಬ ಬೇಡಿಕೆ ಮುಂದಿಟ್ಟರು.

ಪಿಎಸ್ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಅನೇಕ ವರ್ಷಗಳಿಂದ ಭರ್ತಿ ಮಾಡಿಕೊಂಡಿಲ್ಲ. ಕೂಡಲೇ ರಾಜ್ಯ ಸರ್ಕಾರ ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಬೇಕು ಮತ್ತು ಸ್ಪರ್ಧಾತಕ ಪರೀಕ್ಷೆಗಳ ನ್ಯಾಯಯುತ ವಯೋಮಿತಿ ಹೆಚ್ಚಿಸುವಂತೆ ಆಗ್ರಹಿಸುತ್ತಲೇ ವಯೋಮಿತಿ ಹೆಚ್ಚಳ ಮಾಡಿ ನೇಮಕಾತಿ ಮಾಡಿಕೊಳ್ಳಬೇಕು ಎಂದು ಆಗ್ರಹಿಸಿದರು.

ಸುಮಾರು 3000ಕ್ಕೂ ಅಧಿಕ ಅಭ್ಯರ್ಥಿಗಳು ಸಪ್ತಾಪುರ, ಶ್ರೀನಗರ, ಕರ್ನಾಟಕ ಕಾಲೇಜು ಮೂಲಕ ಜ್ಯುಬಿಲಿ ವೃತ್ತದಲ್ಲಿ ಸಂಗಮವಾಗಿ ರಸ್ತೆ ಬಂದ್ ಮಾಡಿ ಧರಣಿ ನಡೆಸಿದರು.
ಲಕ್ಷಾಂತರ ವಿದ್ಯಾರ್ಥಿಗಳು ಹಾಗೂ ಸ್ಪರ್ಧಾತಕ ತರಬೇತಿ ಸಂಸ್ಥೆಗಳು ದೀರ್ಘಕಾಲದಿಂದ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಕಳೆದ ಹಲವು ವರ್ಷಗಳಿಂದ ಅನೇಕ ಇಲಾಖೆಗಳ ನೇಮಕಾತಿ ನಡೆಯದ ಕಾರಣ ಅಭ್ಯರ್ಥಿಗಳು ವಯೋಮಿತಿ ಮೀರಿದ್ದಾರೆ. ನಾಲ್ಕೈದು ವರ್ಷಗಳಿಂದ ಕಾನ್‌ಸ್ಟೆಬಲ್, ಪಿಎಸ್‌ಐ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಸ್ಥಗಿತವಾಗಿದೆ.

ಏಳೆಂಟು ವರ್ಷಗಳಿಂದ ಎಫ್‌ಡಿಎ, ಎಸ್‌ಡಿಎ ಹುದ್ದೆಗಳ ನೇಮಕಾತಿ ನಡೆದಿಲ್ಲ. ಈ ಹಿನ್ನೆಲೆಯಲ್ಲಿ ಕನಿಷ್ಠ ಐದು ವರ್ಷಗಳ ವಯೋಮಿತಿ ಸಡಿಲಿಕೆ ನೀಡಿ ತಕ್ಷಣವೇ ನೇಮಕಾತಿ ಪ್ರಕ್ರಿಯೆ ಆರಂಭಿಸಬೇಕೆಂದು ಆಗ್ರಹಿಸಲಾಯಿತು.

ರೊಚ್ಚಿಗೆದ್ದ ವಿದ್ಯಾರ್ಥಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹಸಚಿವ ಡಾ.ಜಿ.ಪರಮೇಶ್ವರ್, ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಅವರ ಭಾವಚಿತ್ರಗಳನ್ನು ರಸ್ತೆ ಮಧ್ಯೆಯೇ ಧರಣಿ ಕುಳಿತು ಬೆಂಕಿ ಹಚ್ಚಿ ಆಕ್ರೋಶ ಹೊರಹಾಕಿದರು. ಪೊಲೀಸರ ಅನುಮತಿಯನ್ನು ನಿರಾಕರಿಸಿ ಶ್ರೀನಗರ ವೃತ್ತದಿಂದ ವಿಚಿಗನ್ ಕಾಂಪೌಂಡ್ ನವರೆಗೆ ಪ್ರತಿಭಟನೆ ನಡೆಸಲು ಮುಂದಾದಾಗ ಭಾರೀ ನೂಕಾಟ ಉಂಟಾಯಿತು.

ಬೇಕೇ ಬೇಕು ನ್ಯಾಯ ಬೇಕು ಉದ್ಯೋಗ ಕೊಡಿ. ಸರ್ಕಾರಿ ಉದ್ಯೋ?ಗ ಕೊಡಿ ಸಾರ್ ಎಂದು ಕೈಯಲ್ಲಿ ಭಿತ್ತಿಪತ್ರ ಹಿಡಿದಿದ್ದ ವಿದ್ಯಾರ್ಥಿಗಳಿಗೆ ಪೊಲೀಸರು ಎಷ್ಟೆ ಮನವಿ ಮಾಡಿಕೊಂಡರೂ ಪ್ರಯೋಜನವಾಗಲಿಲ್ಲ. ಸ್ಥಳಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಬಂದು ಮನವಿ ಪತ್ರವನ್ನು ಸ್ವಿಕರಿಸಬೇಕು. ಇಲ್ಲದಿದ್ದರೆ ಜಾಗ ಬಿಟ್ಟು ಕದಲುವುದಿಲ್ಲ ಎಂದು ರಸ್ತೆ ಮಧ್ಯೆಯೇ ಕೂತು ಪ್ರತಿಭಟನೆ ನಡೆಸಿದರು.ಜತೆಗೆ ಕೆಎಎಸ್ ಅಧಿಸೂಚನೆಯಲ್ಲಿ ಕಂಡುಬಂದಿರುವ ಕನ್ನಡ ಅನುವಾದದ ತಪ್ಪುಗಳನ್ನು ಪರಿಶೀಲಿಸಿ, ಅಧಿಸೂಚನೆ ರದ್ದುಪಡಿಸುವ ಅಗತ್ಯವಿದೆ ಎಂದು ಆಗ್ರಹಿಸಿದರು.

# ಭೋವಿ ಸಮುದಾಯದವರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು: ನಿಗಮದ ರಾಜ್ಯಾಧ್ಯಕ್ಷ ಎಂ ರಾಮಪ್ಪ ಸಲಹೆ

ವಿಷಯಗಳನ್ನು ಕಡ್ಡಾಯವಾಗಿ ಸಂಬಂಧಿಸಿದ ಅಧಿಕಾರಿಗಳು ಗುರುತಿಸಿ, ಸಂಬಂಧಿಸಿದ ಫಲಾನುಭವಿಗಳೊಂದಿಗೆ ಚರ್ಚಿಸಿ ಸೌಲಭ್ಯ ದೊರಕಿಸಬೇಕು ಎಂದು ಇದೆ ವೇಳೆ ಅಧ್ಯಕ್ಷರು ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಖಂಡರೊಂದಿಗೆ ಸಂವಾದ: ಪ್ರಗತಿ ಪರಿಶೀಲನಾ ಸಭೆಯ ಬಳಿಕ ಸಮುದಾಯದ ಮುಖಂಡರೊಂದಿಗೆ ಅಧ್ಯಕ್ಷರು ಸಂವಾದ ನಡೆಸಿದರು. ತಾಂತ್ರಿಕ ಶಿಕ್ಷಣ ಮುಗಿಸಿದ ಸಮಾಜದ ನಿರುದ್ಯೋಗಿಗಳಿಗೆ ಆರ್ಥಿಕ ಸಹಾಯ ಮಾಡಬೇಕು. ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಬೇಕೆಂದು ಸಭೆಯಲ್ಲಿ ಮೊದಲಿಗೆ ಸಿಂಧನೂರಿನ ಮಲ್ಲೇಶ ಅವರು ಮನವಿ ಮಾಡಿದರು. ನಿಗಮದಿಂದ ವಸತಿ ನಿಯಮವನ್ನು ಪ್ರಾರಂಭಿಸಲು ಅಗತ್ಯ ಕ್ರಮಕೈಗೊಳ್ಳಬೇಕೆಂದು ಮಲ್ಲೇಶ ರಾಯಚೂರು ಅವರು ಒತ್ತಾಯಿಸಿದರು. ನಿಗಮದಿಂದ ಭೂ ಒಡೆತನ ಯೋಜನೆಯಡಿ ಜಮೀನು ಮಂಜೂರಾಗಿದ್ದು, ಜಮೀನಿನ ಮೂಲ ಮಾಲೀಕರು ತಕಾರರು ಹಾಕಿದ್ದು, ಸಮಸ್ಯೆ ಬಗೆಹರಿಸಬೇಕು. ಭೂ ಒಡೆತನ ಯೋಜನೆಯಡಿ ಮಧ್ಯವರ್ತಿಗಳ ಹಾವಳಿಗೆ ಕಡಿವಾಣ ಹಾಡಬೇಕೆಂದು ಹನುಮಂತ ದೇವದುರ್ಗ ಅವರು ಮನವಿ ಮಾಡಿದರು. ಭೋವಿ ಅಭಿವೃದ್ಧಿ ನಿಗಮದಿಂದ ಸಮಾಜದ ಫಲಾನುಭವಿಗಳಿಗೆ ಹೆಚ್ಚಿನ ಮಟ್ಟದಲ್ಲಿ ಸೌಲಭ್ಯಗಳನ್ನು ನೀಡಬೇಕು. ನಿಗಮದ ಕಾರ್ಯಕ್ರಮಗಳ ಬಗ್ಗೆ ಜಾಗೃತಿ ಮಾಡಿಸಬೇಕೆಂದು ವೆಂಕಟೇಶ ಸಿಂಧನೂರು ಅವರು ತಿಳಿಸಿದರು. ಸಾಲ ಸೌಲಭ್ಯ ವಿತರಣೆ ವೇಳೆಯಲ್ಲಿ ಬ್ಯಾಂಕ್ ಅಧಿಕಾರಿಗಳು ಜನರಿಗೆ ಸರಿಯಾದ ರೀತಿಯಲ್ಲಿ ಸ್ಪಂದಿಸುವದಿಲ್ಲ. ಕೂಡಲೇ ಬ್ಯಾಂಕುಗಳ ಅಧಿಕಾರಿಗಳ ಸಭೆ ಕರೆದು ಸೂಕ್ತ ನಿರ್ದೇಶನ ನೀಡಬೇಕು. ಅಲ್ಲದೆ ಭೋವಿ ಸಮಾಜದ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ವಿತರಣೆಗೆ ಅಗತ್ಯ ಕ್ರಮ ವಹಿಸಬೇಕೆಂದು ರಾಯಚೂರಿನ ಶಶಿಕಲಾ ಭೀಮರಾಯ ಅವರು ಅಧ್ಯಕ್ಷರ ಗಮನಕ್ಕೆ ತಂದರು.

ಹಕ್ಕು ಪತ್ರ ವಿತರಣೆ: ನಿಗಮದ ಪ್ರತಿಷ್ಠಿತ ಯೋಜನೆಯಾದ ಭೂ ಒಡೆತನ ಯೋಜನೆಯಡಿ ಸರಸ್ವತಿ ರಮೇಶ, ನಿಂಗಮ್ಮ, ಶೈಲಜಾ, ತಾಯಮ್ಮ, ಉಷಾ, ರೇಣುಕಮ್ಮ ಅವರಿಗೆ ಹಕ್ಕು ಪತ್ರಗಳನ್ನು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ರಾಮಪ್ಪ ಅವರು ವಿತರಣೆ ಮಾಡಿದರು.

ಸಭೆಗೂ ಮುನ್ನ ಸಂವಿಧಾನದ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಅದಿಜಾಂಬವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರಾಜೇಂದ್ರ ಜಲ್ದಾರ್, ಸಮಾಜದ ಮುಖಂಡರಾದ ಯಲ್ಲಪ್ಪ, ನಾರಾಯಣ ಸ್ವಾಮಿ, ಚಿತ್ರದುರ್ಗ ಭೋವಿ ಸಮಾಜದ ಜಿಲ್ಲಾಧ್ಯಕ್ಷರಾದ ತಿಪ್ಪೇಸ್ವಾಮಿ, ಶಶಿಕಲಾ ಭೀಮರಾಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಸಹ ಕಾರ್ಯದರ್ಶಿಗಳಾದ ದಂಡಪ್ಪ ಬಿರಾದಾರ್ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು.

# ಇನಾಂ ಭೂಮಿ ಅಕ್ರಮ ನೋಂದಣಿ ತಡೆಯಲು ಮನವಿ




**ಬಳ್ಳಾರಿ. ಫೆ.24:** ಜಿಲ್ಲೆಯ ಸಿರುಗುಪ್ಪ ತಾಲ್ಲೂಕಿನ ಹಳೇಕೋಟೆ ಮತ್ತು ಸಿರಿಗೇರಿ ಗ್ರಾಮಗಳಲ್ಲಿ ನೂರಾರು ಎಕರೆ ಜಮೀನನ್ನುಅಕ್ರಮವಾಗಿ ಭೂಗಳ್ಳರು ತಮ್ಮ ಹೆಸರಿಗೆ ನೋಂದಾಯಿಸಿಕೊಳ್ಳುತ್ತಿರುವುದನ್ನು ತಡೆಯ ಬೇಕು. ಇದಕ್ಕೆ ಸಹಕರಿಸುತ್ತಿರುವ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳಬೇಕೆಂದು ಕರ್ನಾಟಕ ಪ್ರಾಂತ ರೈತ ಸಂಘದಿಂದ ನಗರದ ಡಿಸಿ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯ್ತು.

ಸಿರುಗುಪ್ಪ ಸಬ್ ರಿಜಿಸ್ಟರ್ ಯಲ್ಲಾರೆಡ್ಡಿ ಅವರು 50 ಕೋಟಿ ಬೆಲೆ ಬಾಳುವ 130 ಎಕರೆ ಸರ್ಕಾರಿ ಇನಾಂ ಜಮೀನನ್ನು ಕಾನೂನು ಬಾಹಿರವಾಗಿ ನೊಂದಣಿ ಮಾಡಿರುವುದರಿಂದ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹಾಕಬೇಕು. ಈ ಕೃಷಿ ಜಮೀನನ್ನು ಸರ್ಕಾರಕ್ಕೆ ಹಿಂಪಡೆದು ಬಡ-ಎಸ್.ಸಿ & ಎಸ್.ಟಿ ಕುಟುಂಬಗಳಿಗೆ ಸಾಗುವಳಿ ಮಾಡುವುವವರೆಗೆ, ಮಾಜಿ ಸೈನಿಕರಿಗೆ ಭೂಮಿ ಮಂಜೂರು ಮಾಡಬೇಕು. ಹಿಂದಿನ ತಹಶೀಲ್ದಾರರು ಹಾಗೂ ಎ.ಸಿ ಅವರು ಈ 130 ಎಕರೆ ಜಮೀನನ್ನು ಸರ್ಕಾರಕ್ಕೆ ವಾಪಸು ಪಡೆಯಲು ಜಿಲ್ಲಾಡಳಿತಕ್ಕೆ ವರದಿ ಸಲ್ಲಿಸಿ 2ವರ್ಷ ಆದರೂ ಇಲ್ಲಿಯ ವರಿಗೂ ಭೂಗಳ್ಳರ ಆಮಿಷಕ್ಕೆ ಒಳಗಾಗಿ ಈ ಕೆಲಸ ಆಗಿಲ್ಲ ಎಂದು ಆರೋಪಿಸಿದ್ದಾರೆ.

ಮನವಿಯನ್ನು ಸಂಘದ ಮುಖಂಡ ವಿ.ಎಸ್.ಶಿವಶಂಕರ್ ಮೊದಲಾದವರು ಸಲ್ಲಿಸಿದ್ದಾರೆ.

# ಬಸವಣ್ಣನವರ ಪರಿಕಲ್ಪನೆ ಎತ್ತಿ ಹಿಡಿದವರು ಬೀದರ್ ಮಂದಿ: ಬಸವರಾಜ ಹೊರಟ್ಟಿ



**ಬೀದರ್: ಫೆ.24:**ಬಸವಣ್ಣನವರ ಪರಿಕಲ್ಪನೆ ಎತ್ತಿ ಹಿಡಿದವರು ಕೇವಲ ಬಿದರ್ ಜನರು ಮಾತ್ರ. ಇವರ ಮುಗ್ದ ಸ್ವಭಾವ, ಸಹಕಾರ ಮನೋಭಾವ, ಇತರರ ಬಗ್ಗೆ ಇವರಿಗಿರುವ ಕಾಳಜಿ ಇಡೀ ನಾಡಿಗೆ ಮಾದರಿ ಪ್ರಾಯವಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಸೋಮವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೀದರ್ ಜಿಲ್ಲಾ ಘಟಕದಿಂದ 40ನೇ ಪತ್ರಕರ್ತರ ರಾಜ್ಯ ಸಮ್ಮೇಳನದ ಕಚೇರಿ ಉದ್ಘಾಟನೆ ಮಾಡಿ ಮಾತನಾಡಿರುವ ಅವರು, ಬಸವಣ್ಣನವರ ಕರ್ಮಭೂಮಿ ಬೀದರ್‌ನಲ್ಲಿ 40ನೇ ಪತ್ರಕರ್ತರ ರಾಜ್ಯ ಸಮ್ಮೇಳನ ಮಾಡಲು ಮುಂದಾಗಿರುವುದು ಬಹಳ ಸಂತೋಷದ ಸಂಗತಿ. ಹೊರ ದೇಶಗಳಿಂದ ಪತ್ರಕರ್ತರನ್ನು ಸಮ್ಮೇಳನಕ್ಕೆ ಅಹ್ವಾನ ಮಾಡಲು ಮುಂದಾಗಿರುವುದು ಸ್ವಾಗತಾರ್ಹ ಕ್ರಮ. ಅವರು ಬೀದರ್‌ಗೆ ಬಂದು ಬಸವಣ್ಣನವರ ಬಗ್ಗೆ ಅರಿತುಕೊಳ್ಳಲು ಬಹಳಷ್ಟು ಅನುಕುಲ ಆಗಲಿದೆ ಎಂದರು.

ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗಗಳನ್ನು ಸರಿ ದಾರಿಗೆ ತರುವ, ಅವುಗಳ ಯೋಜನೆ ಹಾಗೂ ಕಾರ್ಯಶೈಲಿ ಬಿತ್ತರಿಸುವ ಕಾರ್ಯ ಮಾಧ್ಯಮಗಳು ಮಾಡುತ್ತವೆ. ಇಂದು ನನ್ನಂತಹ ಒಬ್ಬ ಪರಿಪೂರ್ಣ ರಾಜಕೀಯ ಧುರಿಣರನ್ನು ತಯ್ಯಾರು ಮಾಡುವ ಹಾಗೂ ಅಂಥವರಿಗೆ ಮಾರ್ಗದರ್ಶನ ಮಾಡುವ ಕಾರ್ಯ ಸಹ ಮಾಧ್ಯಮಗಳು ಮಾಡುತ್ತವೆ. ಇವತ್ತು ನಿಸ್ವಾರ್ಥಿ ರಾಜಕಾರಣಿಗಳು ಸಮಾಜದ ಮುಖ್ಯ ವಾಹಿನಿಗೆ ಬರಲು ಮಾಧ್ಯಮಗಳ ಪಾತ್ರ ಬಹಳಷ್ಟಿದೆ ಎಂದರು.

ಮಾಧ್ಯಮಗಳಲ್ಲಿ ಇನ್ನು ಸಾಕಷ್ಟು ಮಹಿಳೆಯರು ತಮ್ಮನ್ನು ತಾವು ತೊಡಗಿಕೊಳ್ಳಬೇಕು. ಎಲ್ಲ ಕ್ಷೇತ್ರಗಳಲ್ಲಿ ತೋರಿದ ಅಭಿಲಾಷೆ ಈ ಕ್ಷೇತ್ರದಲ್ಲೂ ತೋರಬೇಕು. ಇತ್ತಿಚೀಗೆ ತಗಡೂರು ಅವರ ನೇತೃತ್ವದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಮಾಡುತ್ತಿರುವ ಸಮಾಜಮುಖಿ ಕಾರ್ಯ ಮೆಚ್ಚುವಂಥದ್ದು. ಮುಂಬರುವ ದಿನಗಳಲ್ಲಿ ತಾವು ನಿರ್ಧರಿಸಿದ ರಾಜ್ಯ ಸಮ್ಮೇಳನಕ್ಕೆ ಖಂಡಿತ ಆಗಮಿಸುವುದಾಗಿ ಹೊರಟ್ಟಿ ಭರವಸೆ ನೀಡಿದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ ಪ್ರಭಾಕರ ಸಮ್ಮೇಳನದ ವೆಬಸೈಟ್ ಅನಾವರಣಗೊಳಿಸಿದರು. ಜಿಲ್ಲಾ ಉಸ್ತುವಾರಿ ಮಂತ್ರಿಗಳು ಹಾಗೂ ಸ್ವಾಗತ ಸಮಿತಿಯ ಅಧ್ಯಕ್ಷರಾದ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹಿಮ್ ಖಾನ್ ಮಾತನಾಡಿದರು. ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಿದರು. ಸಂಘದ ಜಿಲ್ಲಾಧ್ಯಕ್ಷ ಅನಂದ ದೇವಪ್ಪ ಪ್ರಾಸ್ತಾವಿಕ ಮಾತನಾಡಿದರು. ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ರಾಜ್ಯ ಸಂಘದ ಉಪಾಧ್ಯಕ್ಷರಾದ ಹೆಚ್.ಬು ಮದನಗೌಡ, ಮತ್ತಿಕೆರೆ ಜಯರಾಮು, ಅಜ್ಜಮಾಡ ರಮೇಶ ಕುಟ್ಟಪ್ಪ, ಕಾರ್ಯದರ್ಶಿಗಳಾದ ಪುಂಡಲಿಕ ಬಾಳೋಜಿ, ಸೋಮಶೇಖರ ಕೆರೆಗುಡು, ಖಜಾಂಚಿ ವಾಸುದೇವ ಹೊಳ್ಳ, ಮಾಜಿ ಉಪಾಧ್ಯಕ್ಷ ವೇದಿಕೆಯಲ್ಲಿದ್ದರು. ಸಂಘದ ಮಾಜಿ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ ಠಾಕೂರ್, ಅಡಾಕ ಸಮಿತಿ ಸದಸ್ಯರಾದ ಶಿವಕುಮಾರ ಸ್ವಾಮಿ, ಅಪ್ಪಾರಾವ ಸೌದಿ, ಮಾಜಿ ಜಿಲ್ಲಾಧ್ಯಕ್ಷರಾದ ಗಂಧರ್ವ ಸೇನಾ, ಮಲ್ಲಿಕಾರ್ಜುನ ಬಿರಾದಾರ, ಮಾಳಪ್ಪ ಅಡಸಾರೆ, ಬಸವರಾಜ ಕಾಮಶೆಟ್ಟಿ, ಸಿದ್ರಾಮಯ್ಯ ಸ್ವಾಮಿ, ಅಶೋಕಕುಮಾರ ಕರಂಜಿ, ಡಿ.ಕೆ ಗಣಪತಿ, ದೀಪಕ ವಾಲಿ, ಡಾ.ರಜನೀಶ ವಾಲಿ, ಶಶಿಕುಮಾರ ಪಾಟೀಲ ಸಂಗಮ ಹಾಗೂ ಇತರರಿದ್ದರು. ಮಾಜಿ ಜಿಲ್ಲಾಧ್ಯಕ್ಷ ಬಾಬುವಾಲಿ ಕಾರ್ಯಕ್ರಮ ನಿರೂಪಿಸಿ, ಪ್ರಥ್ವಿರಾಜ.ಎಸ್ ವಂದಿಸಿದರು.

# ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದಿಂದಸಾರ್ವಜನಿಕ ವಿಚಾರಣೆ: ಜೆಸ್ಕಾಂ ಆರ್ಥಿಕ ಸ್ಥಿತಿಗತಿ ಪರಿಶೀಲನೆ




**ಕಲಬುರಗಿ, ಫೆ24:** ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿಯ (ಜೆಸ್ಕಾಂ) ಸಂಸ್ಥೆಯ 2024-25ನೇ ಆರ್ಥಿಕ ವರ್ಷದ ವಾರ್ಷಿಕ ಕಾರ್ಯ ಪರಿಶೀಲನೆ ಸಂಬಂಧವಾಗಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ (ಕೆಇಆರ್‌ಸಿ) ಸಾರ್ವಜನಿಕ ವಿಚಾರಣಾ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿತು.ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾದ ಕೃಷ್ಣ ಬಾಜಪೇಯಿ ಅವರು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ಗೌರವ ಅಧ್ಯಕ್ಷರಾದ ರವಿಕುಮಾರ್ ಅವರಿಗೆ ಸಲ್ಲಿಸಿದ ವಾರ್ಷಿಕ ಕಾರ್ಯನಿರ್ವಹಣಾ ವರಿದಿ ಪ್ರಸ್ತಾವನೆಯನ್ನು ಅನುಮೋದಿಸಿ, 131 ಕೋಟಿ ನಷ್ಟ ಉಂಟಾಗಿದ್ದು ಅದನ್ನು ಸರಿದೂಗಿಸುವಂತೆ ಮನವಿ ಮಾಡಿದರು.ಕೆಇಆರ್‌ಸಿ ಅನುಮೋದಿತ ವೆಚ್ಚ ಮತ್ತು ಆದಾಯದ ನಡುವೆ ವ್ಯತ್ಯಾಸ ಉಂಟಾಗಿದ್ದು, ಸಂಸ್ಥೆಯ ಆದಾಯ ಮತ್ತು ಖರ್ಚು ಎರಡೂ ಹೆಚ್ಚಾಗಿದೆ. 131 ಕೋಟಿ ರೂಪಾಯಿ ಬಾಕಿ ಉಳಿದಿರುವುದರಿಂದ, ಅದನ್ನು ಸರಿದುಗಿಸುವುದು ಅಗತ್ಯವಿದೆ ಎಂದು ಅವರು ವಿವರಿಸಿದರು.ಈ ಕುರಿತು ಕೆಇಆರ್‌ಸಿ ಅಧ್ಯಕ್ಷರು ವಿಷಯವನ್ನು ಪರಿಗಣಿಸಿ ಸೂಕ್ತ ತೀರ್ಮಾನ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

ಸಭೆಯಲ್ಲಿ ಕಂಪನಿಯ ಆದಾಯ-ವೆಚ್ಚ ವಿವರಗಳು, ವಿದ್ಯುತ್ ಖರೀದಿ ವೆಚ್ಚ, ವಿತರಣೆ ವ್ಯವಸ್ಥೆ ಸುಧಾರಣೆ, ಬಂಡವಾಳ ಹೂಡಿಕೆ ಯೋಜನೆಗಳು ಹಾಗೂ ನಷ್ಟ ಕಡಿತ ಕ್ರಮಗಳ ಕುರಿತು ಪ್ರಸ್ತುತಪಡಿಸಲಾಯಿತು.ಇದೇ ಸಂದರ್ಭದಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ಗೌರವ ಸದಸ್ಯರಾದ ಹೆಚ್.ಕೆ. ಜಗದೀಶ್, ಜೆಸ್ಕಾಂ ಅಧ್ಯಕ್ಷರಾದ ಪ್ರವೀಣ್ ಪಾಟೀಲ ಹಾರವಾಳ, ನಿರ್ದೇಶಕರು (ತಾಂತ್ರಿಕ) ಚಂದ್ರಕಾಂತ ಪಾಟೀಲ್ ಹಾಗೂ ಮುಖ್ಯ ಹಣಕಾಸು ಅಧಿಕಾರಿ ಬಿ.ಎಚ್. ಶಿವಶಂಕರ್ ಉಪಸ್ಥಿತರಿದ್ದರು.

ಗ್ರಾಹಕರ ಅಭಿಪ್ರಾಯ: ಮೊಬಿ ಮಹಮ್ಮದ್ ಮಾತನಾಡಿ, “ಕಂಪನಿಯ ಹೆಚ್ಚುವರಿ ವ್ಯತ್ಯಾಸವನ್ನು ಗ್ರಾಹಕರ ಮೇಲೆ ಹೇರುವುದು ಸಮಂಜಸವಲ್ಲ. ಇದು ಗ್ರಾಹಕರಿಗೆ ಹೊರೆಯಾಗುತ್ತದೆ,” ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಪ್ರಶ್ನೋತ್ತರ: ದೀಪಕ ಗಾಲಾ (ಸಾಮಾಜಿಕ ಕಾರ್ಯಕರ್ತರು):ರಾಯಚೂರು ನಗರದ ಮುನಿರ್‌ವಾಡಿ ಮತ್ತು ದೇವಿನಗರ ಫೀಡರ್‌ಗಳಲ್ಲಿ ಪ್ರತಿ ವರ್ಷ 15% ನಷ್ಟವಾಗುತ್ತಿದೆ. ಸೇಫ್ಟಿ ಆಫೀಸರ್ ನೇಮಕ ಮಾಡಿ, ಸಿಬ್ಬಂದಿಗೆ ಸುರಕ್ಷತಾ ತರಬೇತಿ ನೀಡಬೇಕು. ಪ್ರತಿ 3 ತಿಂಗಳಿಗೊಮ್ಮೆ ಗ್ರಾಹಕ ಸಂವಾದ ಸಭೆ ನಡೆಸಬೇಕು.

ಉತ್ತರ: ಪ್ರತಿ 3 ತಿಂಗಳಿಗೊಮ್ಮೆ ಗ್ರಾಹಕ ಸಂವಾದ ಸಭೆ ನಡೆಸುವುದಾಗಿ ಭರವಸೆ ನೀಡಿದರು. ಮುನಿರವಾಡಿ ಮತ್ತು ದೇವಿನಗರ ಪ್ರದೇಶಗಳಿಗೆ ಭೇಟಿ ನೀಡಿ ಸಮಸ್ಯೆ ಬಗೆಹರಿಸುವುದಾಗಿ ತಿಳಿಸಿದರು.

ಮಲ್ಲಿಕಾರ್ಜುನ್ ರಾಂಪೂರ:ರಾಯಚೂರು ಜಿಲ್ಲೆಯಲ್ಲಿ ವಿದ್ಯುತ್ ದೂರುಗಳಿಗೆ ಪ್ರತಿಕ್ರಿಯೆ ಸಿಗುತ್ತಿಲ್ಲ ಎಂದು ಆರೋಪಿಸಿದರು. ಉತ್ತರ: ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಶಾಂತಗೌಡ ಜಾಗಿದಾರ: ವಿದ್ಯುತ್ ಕಳ್ಳತನಕ್ಕೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಅಧಿಕಾರಿಗಳು ಕಚೇರಿಯಲ್ಲಿ ಕುಳಿತು ಸಹಿ ಮಾಡುವ ಬದಲು ಸ್ಥಳ ಪರಿಶೀಲನೆ ನಡೆಸಬೇಕು.

ಉತ್ತರ: ವಿದ್ಯುತ್ ಕಳ್ಳತನ ಪತ್ತೆ ಮಾಡಲು ಜಾಗೃತ ದಳ 247 ಕಾರ್ಯನಿರ್ವಹಿಸುತ್ತಿದ್ದು, ಅಪರಾಧಿಗಳಿಗೆ ದಂಡ ವಿಧಿಸಲಾಗುತ್ತದೆ. ಅಧಿಕಾರಿಗಳು ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದರು.

ಸಿದ್ದರಾಮಯ್ಯ ಹೀರೆಮಠ:ಜೆಸ್ಕಾಂನ ಸಾಮಾಜಿಕ ಜಾಲತಾಣಗಳು ಚುರುಕಾಗಬೇಕು. ಕುಂದುಕೊರತೆ ಸಭೆಗಳ ಮಾಹಿತಿ ವೆಬ್ ಸೈಟ್‌ನಲ್ಲಿ ಪ್ರಕಟಿಸಬೇಕು. ಜಾಗೃತ ದಳಕ್ಕೆ ಪ್ರತ್ಯೇಕ ಸಹಾಯವಾಣಿ ಆರಂಭಿಸಬೇಕು.

ಉತ್ತರ: ಜಾಗೃತ ದಳಕ್ಕೆ ಪ್ರತ್ಯೇಕ ಸಹಾಯವಾಣಿ ಆರಂಭಿಸುವ ಬಗ್ಗೆ ಪರಿಗಣಿಸಲಾಗುವುದು ಎಂದು ಹೇಳಿದರು.

ಸಿದ್ದಣ್ಣ ಕಲ್ಲಶೆಟ್ಟಿ: ಟ್ರಾನ್ಸ್ಫಾರ್ಮರ್ (ಟಿ.ಸಿ) ಸುಟ್ಟರೆ ಬದಲಾವಣೆ ವಿಳಂಬವಾಗುತ್ತಿದೆ. 1 ಲಕ್ಷ ರೂಪಾಯಿ ಬೇಡಿಕೆ ಇರುತ್ತದೆ ಎಂಬ ಆರೋಪ ಮಾಡಿದರು.

ಉತ್ತರ: ಒಂದು ಟಿ.ಸಿ ಬದಲಾವಣೆಗಾಗಿ 25 ಸಾವಿರ ರೂ. ವೆಚ್ಚವಾಗುತ್ತದೆ. 2 ದಿನಗಳೊಳಗೆ ಬದಲಾವಣೆ ಮಾಡಬೇಕು ಎಂದು ತಿಳಿಸಿದರು.

# ಡಾ. ಚಿ.ಸಿ. ನಿಂಗಣ್ಣನವರಿಗೆ ಹಾರಕೂಡಮಠದ ಚನ್ನಶ್ರೀ ಪ್ರಶಸ್ತಿ



**ಕಲಬುರಗಿ,ಫೆ.24–** ಸೂಕ್ಷೇತ್ರ ಹಾರಕೂಡದ ಲಿಂಗೈಕ್ಯ ಶ್ರೀ ಚನ್ನಬಸವ ಶಿವಯೋಗಿಗಳ 75ನೇ ಜಾತ್ರಾ ಅಮೃತಮಹೋತ್ಸವು ಚಿಂಚೋಳಿಯಲ್ಲಿ ಜರುಗಲಿದೆ. ಪೂಜ್ಯ ಶ್ರೀ ಷ.ಬ್ರ.ಡಾ. ಚನ್ನವೀರ ಶಿವಾಚಾರ್ಯರು ಪೀಠಾಧಿಪತಿಗಳು ಹಾರಕೂಡ ಹಾಗೂ ಪಾವನ ಸನ್ನಿದಾನದಲ್ಲಿ ಶ್ರೀಮಠವು ನೀಡುವ ಚನ್ನಶ್ರೀ ಪ್ರಶಸ್ತಿ ಪುರಸ್ಕಾರಕ್ಕೆ ಸಾಹಿತ್ಯಕ್ಷೇತ್ರದಿಂದ ಕಲಬುರಗಿಯ ಸಾಹಿತಿಗಳಾದ ಡಾ.ಚಿ.ಸಿ. ನಿಂಗಣ್ಣನವರು

ಆಯ್ಕೆಯಾಗಿದ್ದು, ದಿನಾಂಕ 26–2–2026 ರಂದು ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ಶಿವಾನುಭವ ಚಿಂತನ ಕಾರ್ಯಕ್ರಮದಲ್ಲಿ ಗಣ್ಯಮಾನ್ಯರ ಸಮ್ಮುಖದಲ್ಲಿ ಚನ್ನಶ್ರೀ ಪ್ರಶಸ್ತಿ ಪ್ರದಾನ ಮಾಡುವರು.

ಪ್ರಶಸ್ತಿಯೂ 5 ಗ್ರಾಂ. ಬಂಗಾರ, ಪ್ರಶಸ್ತಿ ಫಲಕಹೊಂದಿರುತ್ತದೆ. ಡಾ.ಚಿ.ಸಿ. ನಿಂಗಣ್ಣನವರು ಕಲ್ಯಾಣ ಕರ್ನಾಟಕದ ಶೋಧನಾತ್ಮಕ ಬರಹಗಾರರು. ಸಾಹಿತಿ, ಸಂಶೋಧಕ, ಜಾನಪದ ವಿದ್ವಾಂಸರಾದ ಇವರು ವೈಚಾರಿಕ ನೆಲೆಯ ಸಾಂಸ್ಕೃತಿಕ ಚಿಂತಕರೆಂದು ಹೆಸರಾಗಿದ್ದಾರೆ. ಇವರು &ಡಣಂಣ;ಕಲಬುರಗಿ ಜಿಲ್ಲೆಯ ಜಾತ್ರೆಗಳು ಒಂದು ಜಾನಪದೀಯ ಅಧ್ಯಯನ&ಡಣಂಣ; ಎಂಬ ಸಂಶೋಧನಾ ಮಹಾಪ್ರಬಂಧವನ್ನು ಗು.ವಿ.ವಿ.ಗೆ ಮಂಡಿಸಿ ಪಿಹೆಚ್.ಡಿ ಡಾಕ್ಟರೇಟ ಪದವಿ ಪಡೆದಿದ್ದಾರೆ. ಶಿಕ್ಷಣ–ಸಂಘಟನೆ–ಹೋರಾಟದಲ್ಲಿ ಭಾಗಿಯಾಗುತ್ತ ಬಂದ ಇವರು ಗು.ವಿ.ವಿ. ಪದವೀಧರರ ಸಂಘಟನೆಯ ಅಧ್ಯಕ್ಷರಾಗಿ ಕಲಂ–371 (ಎ) ಜಾರಿ ಹೋರಾಟದಲ್ಲಿ ಭಾಗಿಯಾಗಿದ್ದಾರೆ.

ವೃತ್ತಿಯಿಂದ ಕನ್ನಡ ಉಪನ್ಯಾಸಕರಾದ ಇವರು ಕನ್ನಡ ಸಾಹಿತ್ಯಕ್ಷೇತ್ರದಲ್ಲಿ ತುಂಬಾ ಆಸಕ್ತಿ ಹೊಂದಿರುವವರು, ಕನ್ನಡ ಸಾಹಿತ್ಯದ: ವಚನ, ಜಾನಪದ, ಸಂಶೋಧನೆ, ವಿಚಾರ ಸಾಹಿತ್ಯ, ಕಾವ್ಯ, ಕಥೆ, ಚರಿತ್ರೆ, ಸಂಪಾದನೆ ಹೀಗೆ ಸಾಹಿತ್ಯದ ಹಲವು ಪ್ರಕಾರಗಳಲ್ಲಿ ಒಟ್ಟು 45ಕ್ಕೂ

ಹೆಚ್ಚು ಮೌಲಿಕವಾದ ಕೃತಿಗಳನ್ನು ರಚಿಸಿದ್ದಾರೆ. ಇವರ ಪ್ರಮುಖ ಕೃತಿಗಳು : ಕಲಬುರಗಿ ಜಿಲ್ಲೆಯ ಜಾತ್ರೆಗಳು, ಬಸವಣ್ಣನವರ ವಚನಗಳಲ್ಲಿ ಸಮಾಜೋಧಾರ್ಮಿಕ ಪ್ರಜ್ಞೆ, ವೈಚಾರಿಕತೆ ಮತ್ತು ಸಾಹಿತ್ಯ, ಕಡೆಗೀಲು ಬಂಡಿಗಾದಾರ, ಜಾಗತೀಕರಣ ಮತ್ತು ಜಾನಪದ,

ಕನ್ನಡ ಸಾಹಿತ್ಯ ಸಂಸ್ಕೃತಿಕೋಶ, ಜಾಗತೀಕರಣದಲ್ಲಿ ಜಾತ್ರೆಗಳು, ನಮ್ಮೂರು ಜಾನಪದ, ಜಾನಪದ ದರ್ಪಣ, ಸಂಸ್ಕೃತಿ ಮತ್ತು ಜಾನಪದ,

ಕುರುಬರ ಆಚರೆಣೆಗಳು, ಬಾಡದ ಮನಸು, ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣ, ಕುವೆಂಪು, ಅಕ್ಷರದ ಅವ್ವ ಸಾವಿತ್ರಿಬಾಯಿ ಪುಲೆ,

ಸಾಮಾಜಿಕ ಪರಿವರ್ತನೆಯ ಹರಿಕಾರ ದೇವರಾಜ ಅರಸು ಇತ್ಯಾದಿಗಳು. ಆಕಾಶವಾಣಿ, ದೂರದರ್ಶನದಲ್ಲಿ ಅನೇಕಾಬಾರಿ ಕಾರ್ಯಕ್ರಮ ನೀಡಿದ್ದಾರೆ.

ನೂರಾರು ಕಡೆ ವಿಶೇಷ ಉಪನ್ಯಾಸ ನೀಡಿದ ಇವರು ಉತ್ತಮ ಭಾಷಣಕಾರರು ಹೌದು. ಇವರು ಹತ್ತಾರು ಕಡೆ ರಾಜ್ಯ–ರಾಷ್ಟ್ರಮಟ್ಟದ

ವಿಚಾರ ಸಂಕಿರಣಗಳಲ್ಲಿ, ತಾಲೂಕು, ಜಿಲ್ಲಾ, ಅಖಿಲಭಾರತ ಕನ್ನಡ ಸಾಹಿತ್ಯ ಸಮ್ಮೇಳನಗಳಲ್ಲಿ ಭಾಗಿಯಾಗಿ ವಿಷಯ ಮಂಡಿಸಿದ್ದಾರೆ. ಹಲವು ಸಂಘ– ಸಂಸ್ಥೆಗಳ ಅಧ್ಯಕ್ಷರಾದ ಇವರು ಸಾಹಿತ್ಯ–ಸಾಂಸ್ಕೃತಿಕ–ಸಾವಾಜಿಕವಾಗಿ ನೂರಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತ ಬಂದಿದ್ದಾರೆ.

ಇವರ ಅಮೂಲ್ಯವಾದ ಸಾಧನೆಯುನ್ನು ಪರಿಗಣಿಸಿದ ಪರಮಪೂಜ್ಯ ಶ್ರೀ ಚನ್ನವೀರ ಶಿವಾಚಾರ್ಯರು ಚನ್ನಶ್ರೀ ಪ್ರಶಸ್ತಿ ಪ್ರದಾನಮಾಡಿ ಆಶೀರ್ವಾದ ಮಾಡಲಿದ್ದಾರೆ.

# ಗುವಿವಿ 43ನೇ ಘಟಿಕೋತ್ಸವ: ಮೂವರು ಸಾಧಕರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ




**ಕಲಬುರಗಿ,ಫೆ.24–**ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಇಂದು ನಡೆದ 43ನೇ ಘಟಿಕೋತ್ಸವದಲ್ಲಿ ಮೂವರು ಸಾಧಕರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಯಿತು.

ವಿಶ್ವವಿದ್ಯಾಲಯದ ಜ್ಞಾನಗಂಗಾ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಘಟಿಕೋತ್ಸವದಲ್ಲಿ ರಾಜ್ಯದ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯಗಳ ಕುಲಾಧಿಪತಿಗಳಾದ ಥಾವರ್ ಚಂದ್ ಗೆಹ್ಲೋಟ್ ಅವರು ಸಾಮಾಜಿಕ ಮತ್ತು ರಾಜಕೀಯ ಕ್ಷೇತ್ರದಲ್ಲಿನ ಸಾಧನೆಗಾಗಿ ಮಾಜಿ ಸಚಿವ ಪಿ.ಜಿ.ಆರ್.ಸಿಂಧ್ಯಾ, ಸಾಮಾಜಿಕ ಸೇವೆ ಪರಿಗಣಿಸಿ ಮಾಜಿ ಸಚಿವ ಮುರುಗೇಶ ನಿರಾಣಿ ಹಾಗೂ ಸಾಮಾಜಿಕ ಸೇವೆ ಗುರುತಿಸಿ ಹೋರಾಟಗಾರ ಕೇದಾರಲಿಂಗಯ್ಯ ಹಿರೇಮಠ ಅವರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿದರು.

ಪುಣೆಯ ಉನ್ನತ ರಕ್ಷಣಾ ತಂತ್ರಜ್ಞಾನ ಸಂಸ್ಥೆ (ಡೀಮ್ಡ್ ವಿಶ್ವವಿದ್ಯಾಲಯ)ಯ ವಿಶ್ರಾಂತ ಕುಲಪತಿ ಪ್ರೊ ಎಲ್.ಎಂ. ಪಟ್ನಾಯಕ್ ಅವರು ಘಟಿಕೋತ್ಸವ ಭಾಷಣ ಮಾಡಿದರು.

ಉನ್ನತ ಶಿಕ್ಷಣ ಸಚಿವ ಹಾಗೂ ವಿಶ್ವವಿದ್ಯಾಲಯಗಳ ಸಮ ಕುಲಾಧಿಪತಿ ಡಾ.ಎಂ.ಸಿ.ಸುಧಾಕರ, ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಶಶಿಕಾಂತ ಎಸ್.ಉಡಿಕೇರಿ, ಕುಲಸಚಿವ ಪ್ರೊ.ರಮೇಶ ಲಂಡನಕರ್, ಮೌಲ್ಯಮಾಪನ ಕುಲಸಚಿವ ಡಾ.ಎನ್.ಜಿ.ಕಣ್ಣೂರು, ವಿತ್ತಾಧಿಕಾರಿ ಜಯಾಂಬಿಕ ವೇದಿಕೆ ಮೇಲಿದ್ದರು.

77 ವಿದ್ಯಾರ್ಥಿಗಳಿಗೆ 172 ಚಿನ್ನದ ಪದಕ–43ನೇ ವಾರ್ಷಿಕ ಘಟಿಕೋತ್ಸವದಲ್ಲಿ ವಿವಿಧ ಸ್ನಾತಕ ಪದವಿ ಕೋರ್ಸುಗಳಿಗೆ 24 ಹಾಗೂ ವಿವಿಧ ಸ್ನಾತಕೋತ್ತರ ಕೋರ್ಸುಗಳಿಗೆ 148 ಸೇರಿ ಒಟ್ಟಾರೆ 172 ಚಿನ್ನದ ಪದಕಗಳನ್ನು 58 ಮಹಿಳಾ ವಿದ್ಯಾರ್ಥಿಗಳು ಹಾಗೂ 19 ಪುರುಷ ವಿದ್ಯಾರ್ಥಿಗಳು ಸೇರಿದಂತೆ 77 ವಿದ್ಯಾರ್ಥಿಗಳಿಗೆ ವಿತರಿಸಲಾಯಿತು. ಇನ್ನುಳಿದಂತೆ 9 ಚಿನ್ನದ ಪದಕಗಳನ್ನು ನಗದು ಬಹುಮಾನ ರೂಪದಲ್ಲಿ ಪರಿವರ್ತಿಸಿ 14 ಮಹಿಳಾ ವಿದ್ಯಾರ್ಥಿಗಳು ಮತ್ತು 5 ಪುರುಷ ವಿದ್ಯಾರ್ಥಿಗಳು ಸೇರಿ 19 ವಿದ್ಯಾರ್ಥಿಗಳಿಗೆ ನೀಡಲಾಯಿತು.

ಚಿನ್ನದ ಹುಡುಗಿ ಚನ್ನಮ್ಮ–ಚಿನ್ನದ ಪದಕ ವಿಜೇತರಲ್ಲಿ ಗುಲಬರ್ಗಾ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿರುವ ಕನ್ನಡ ಅಧ್ಯಯನ ಸಂಸ್ಥೆಯ ವಿದ್ಯಾರ್ಥಿನಿ ಕು. ಚನ್ನಮ್ಮ ಇವರು ಅತಿ ಹೆಚ್ಚು 11 ಚಿನ್ನದ ಪದಕಗಳಿಗೆ ಭಾಜನರಾಗಿದ್ದು, ಘಟಿಕೋತ್ಸವದಲ್ಲಿ ಇಂದು ಅವರಿಗೆ ಪದಕಗಳನ್ನು ನೀಡಲಾಯಿತು. ಪ್ರಾಣಿಶಾಸ್ತ್ರ ವಿಭಾಗದ ಕು. ರಾಹುಲ್ ಇವರು 9, ಎಂಬಿಎ ಅಧ್ಯಯನ ವಿಭಾಗದ ವಿದ್ಯಾರ್ಥಿನಿ ಕು. ಸುರೇಖಾ 8, ರಾಜ್ಯಶಾಸ್ತ್ರ ವಿಷಯದಲ್ಲಿ ಸೇಡಂನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿ ಕು. ಶಮೀಮ ರಫತ್ 6, ಸಮಾಜ ಕಾರ್ಯ ಅಧ್ಯಯನ ವಿಭಾಗದ ವಿದ್ಯಾರ್ಥಿನಿ ಕು. ದೀಪಾ 6, ಗಣಕ ವಿಜ್ಞಾನ ವಿಭಾಗದ ವಿದ್ಯಾರ್ಥಿನಿ ಕು. ಸುಬೀಯಾ ನೂರೈನ್ 5, ರಸಾಯನಶಾಸ್ತ್ರ ವಿಭಾಗದ ವಿದ್ಯಾರ್ಥಿನಿ ಕು. ಪ್ರಿಯಾಂಕಾ ರಾಠೋಡ್ 5, ಜೀವ ರಸಾಯನಶಾಸ್ತ್ರ ವಿಭಾಗದ ವಿದ್ಯಾರ್ಥಿ ಕು. ಶಶಿಕುಮಾರ್ 5 ಹಾಗೂ ಕಲಬುರಗಿ ನಗರದ ಗುರುಕುಲ ಪದವಿ ಮಹಾವಿದ್ಯಾಲಯದ ವಿದ್ಯಾರ್ಥಿನಿ ಕು. ಪ್ರೀತಿ ಜಿ. ಖೇಮ್ಕರ್ ಅವರು ಬಿಕಾಂ ಕೋರ್ಸಿನಲ್ಲಿ 5 ಚಿನ್ನದ ಪದಕ ಪಡೆದಿದ್ದಾರೆ.

123 ಅಭ್ಯರ್ಥಿಗಳಿಗೆ ಪಿ.ಎಚ್.ಡಿ. ಪದವಿ–43ನೇ ಘಟಿಕೋತ್ಸವದಲ್ಲಿ ವಿವಿಧ ನಿಕಾಯಗಳಲ್ಲಿ ಒಟ್ಟು 123 ವಿದ್ಯಾರ್ಥಿಗಳಿಗೆ ಪಿಎಚ್.ಡಿ ಪದವಿ ಪ್ರದಾನ ಮಾಡಲಾಯಿತು. ಕಲಾ ನಿಕಾಯದಲ್ಲಿ 30, ಸಮಾಜ ವಿಜ್ಞಾನ ನಿಕಾಯದಲ್ಲಿ 26, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದಲ್ಲಿ 47, ವಾಣಿಜ್ಯ ಮತ್ತು ನಿರ್ವಹಣಾ ನಿಕಾಯದಲ್ಲಿ 9, ಶಿಕ್ಷಣ ನಿಕಾಯದಲ್ಲಿ 7 ಹಾಗೂ ಕಾನೂನು ನಿಕಾಯದಲ್ಲಿ 4 ವಿದ್ಯಾರ್ಥಿಗಳಿದ್ದಾರೆ. ಒಟ್ಟಾರೆಯಾಗಿ 62 ಪುರುಷ ಹಾಗೂ 61 ಮಹಿಳಾ ಸಂಶೋಧನಾ ವಿದ್ಯಾರ್ಥಿಗಳು ಪಿಎಚ್.ಡಿ ಪದವಿ ಪಡೆದರು.

19,133 ಅಭ್ಯರ್ಥಿಗಳಿಗೆ ಪದವಿ ಪ್ರದಾನ–ಪದವಿ ಕೋರ್ಸಿನಲ್ಲಿ 15,504, ಸ್ನಾತಕೋತ್ತರ ಕೋರ್ಸ್ನಲ್ಲಿ 3,462, ಪಿ.ಜಿ. ಡಿಪ್ಲೋಮಾ ಕೋರ್ಸಿನಲ್ಲಿ 44 ಹಾಗೂ ಪಿ.ಎಚ್.ಡಿ. ಪದವಿ 123 ಸೇರಿದಂತೆ ಒಟ್ಟಾರೆ 19,133 ವಿದ್ಯಾರ್ಥಿಗಳು ವಿವಿಧ ಪದವಿಗಳನ್ನು ಪಡೆದಿದ್ದು, ಇದರಲ್ಲಿ 10,463 ಪುರುಷ ಹಾಗೂ 8,670 ಮಹಿಳಾ ವಿದ್ಯಾರ್ಥಿಗಳು ಸೇರಿದ್ದಾರೆ.

# ರಾಜ್ಯ ಸಮ್ಮೇಳನಕ್ಕೆ ಸರ್ಕಾರದಿಂದ 20 ಲಕ್ಷ ರೂ. ಬಿಡುಗಡೆ: ಪ್ರಭಾಕರ್



**ಬೀದರ್:ಫೆ.24:** ಬೀದರ್‌ನಲ್ಲಿ ಮಾರ್ಚ್ 28 ಹಾಗೂ 29ರಂದು ನಡೆಯಲಿರುವ 40ನೇ ಪತ್ರಕರ್ತರ ರಾಜ್ಯ ಸಮ್ಮೇಳನಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ರಾಜ್ಯ ಸಂಘದ ಮನವಿ ಮೆರೆಗೆ 20 ಲಕ್ಷ ಹಣ ಬಿಡುಗಡೆ ಮಾಡಿದ್ದಾರೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ ಪ್ರಭಾಕರ್ ಕರೆ ನೀಡಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಜಿಲ್ಲಾ ಪತ್ರಿಕಾ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ "ಸಮ್ಮೇಳನದ ವೆಬ್ ಸೈಟ್" ಉದ್ಘಾಟಿಸಿ ಮಾತನಾಡಿದರು.

ಪತ್ರಕರ್ತ ಸಮುದಾಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೊದಲಿನಿಂದಲೂ ನೆರಳಾಗಿ ನಿಂತಿದ್ದಾರೆ. ಈ ಬಾರಿಯ ಬಜೆಟ್ ನಲ್ಲೂ ಶ್ರಮಿಕ ಪತ್ರಕರ್ತ ಸಮುದಾಯಕ್ಕೆ ಉತ್ತಮ ಅನುಕೂಲಗಳು ಆಗುವ ಭರವಸೆ ಇದೆ ಎಂದರು.ತಾಂತ್ರಿಕ ಮತ್ತು ನೈತಿಕ ಸವಾಲುಗಳ ಬಗ್ಗೆ ಅರ್ಥಪೂರ್ಣ ಚರ್ಚೆಯಾಗಲಿ ಇಂದು ಅಭಿವೃದ್ಧಿ ಪತ್ರಿಕೋದ್ಯಮ ಪಕ್ಕಕ್ಕೆ ಸರಿದು ಹೇಳಿಕೆ ಆಧಾರಿತ ಪತ್ರಿಕೋದ್ಯಮವೇ ಪ್ರಧಾನ ಆಗುತ್ತಿರುವುದು ಆರೋಗ್ಯಕರ ಸಂಗತಿ ಅಲ್ಲ. ಹೀಗಾಗಿ ಕಾರ್ಯನಿರತ ಪತ್ರಕರ್ತರ 40ನೇ ಸಮ್ಮೇಳನ ಮಾಧ್ಯಮ ಜಗತ್ತಿನ "ಚಿಂತನ–ಮಂಥನ" ದ ವೇದಿಕೆಯಾಗಬೇಕು ಎಂದು ಕರೆ ನೀಡಿದರು.

ಕಾರ್ಯನಿರತ ಪತ್ರಕರ್ತರ ಸಮ್ಮೇಳನಗಳು ಒಂದು ಅರ್ಥದಲ್ಲಿ "ಪಿಟ್ ಸ್ಟಾಪ್ಸ್" ಎಂದು ಹೇಳಬಹುದು. ರೇಸಿಂಗ್ ಕಾರುಗಳು ತಮ್ಮ ಓಟದ ನಡುವೆ ಟೈರ್ ಗಳನ್ನು ಬದಲಾಯಿಸಲು, ಇಂಧನ ತುಂಬಿಸಿಕೊಳ್ಳಲು ಮಾರ್ಗ ಮಧ್ಯದಲ್ಲಿ ಇರುವ ನಿಲ್ದಾಣಗಳನ್ನು ಪಿಟ್ ಸ್ಟಾಪ್ಸ್ ಎಂದು ಕರೆಯುತ್ತಾರೆ. ವೈರಲ್ ಸುದ್ದಿಗಳ ವೇಗದಲ್ಲಿ ಓಡುತ್ತಿರುವ ಉದ್ಯಮಕ್ಕೆ ಈಗ ಇಂಥಾ ಪಿಟ್ ಸ್ಟಾಪ್ಸ್ ಗಳ ಅಗತ್ಯ ತುಂಬ ಇದೆ ಎಂದು ವಿವರಿಸಿದರು.

ಈ ಸಮ್ಮೇಳನ ವೃತ್ತಿಪರರಿಗೆ ತಮ್ಮ ನೋಟಗಳನ್ನು, ಆಯ್ಕೆಗಳನ್ನು ಮತ್ತು ವೃತ್ತಿಪರತೆಯನ್ನು ತೀಕ್ಷ್ಣಗೊಳಿಸಿಕೊಳ್ಳಲು ಮತ್ತು ಅವರ ಆಂತರಿಕ ದಿಕ್ಸೂಚಿಯನ್ನು ಮರು ಚಿಂತನಗೆ ಒಳಪಡಿಸಿಕೊಳ್ಳಲು ವೇದಿಕೆ ಒದಗಿಸುತ್ತದೆ ಎನ್ನುವ ಭರವಸೆ ಇದೆ ಎಂದು ಆಶಿಸಿದರು. ಕೃತಕ ಬುದ್ಧಿಮತ್ತೆ ತಂತ್ರಜ್ಞಾನ–ಚಾಲಿತ ಯುಗದಲ್ಲಿ ನಮ್ಮ ಕೌಶಲ್ಯಗಳನ್ನು ನವೀಕರಣಗೊಳಿಸಿಕೊಳ್ಳುವುದರ ಜೊತೆಗೆ

ಪತ್ರಿಕೋದ್ಯಮದ ಆದ್ಯತೆಗಳನ್ನೂ ಮರು ಪರಿಶೀಲನೆಗೆ ಚರ್ಚೆಗೆ ಒಳಪಡಿಸಬೇಕಿದೆ. ಇವತ್ತಿನ ತಾಂತ್ರಿಕ ವೇಗ ಮತ್ತು ಹೊಸ ಹೊಸ ತಂತ್ರಜ್ಞಾನದ ವೇಗದಲ್ಲಿ ಬಹುತೇಕ ಪ್ರತಿ ಐದು ವರ್ಷಗಳಿಗೆ ಒಮ್ಮೆ ನಾವು ಕಲ್ಪಿಸಕೊಳ್ಳಲಾಗದ ತಂತ್ರಜ್ಞಾನ ಹೊರಗೆ ಬರುತ್ತಿವೆ. ಹೊಸದಾಗಿ ಬಂದಿರುವ ಎಐ ತಂತ್ರಜ್ಞಾನದ ಸಾಧ್ಯತೆಗಳನ್ನು ಮತ್ತು ಅಪಾಯಗಳನ್ನು ನಾವು ಸರಿಯಾಗಿ ಗ್ರಹಿಸವ ಮೊದಲೇ ಹೊಸ ತಂತ್ರಜ್ಞಾನ ಬಂದಿರುತ್ತದೆ. ಈಗಾಗಲೇ ಎಐ ಕೂಡ ಹಳತಾಗಿ "ಸೂಪರ್ ಎಐ ಅಂತ ಬರುತ್ತಿದೆ ಎಂದು ಎಚ್ಚರಿಸಿದರು.ಇವೆಲ್ಲವನ್ನೂ ಅರಿಯುವ ಮತ್ತು ಅಪಾಯಗಳನ್ನು ತಡೆಯುವ ಕಾರ್ಯಾಗಾರವಾಗಿ ಈ ಬಾರಿಯ ಸಮ್ಮೇಳನ ಯಶಸ್ವಿಯಾಗಲಿ ಎಂದು ಆಶಿಸುತ್ತೇನೆ ಎಂದರು. ಡೀಫ್‌ಪೇಕ್‌ಗಳನ್ನು ಹೇಗೆ ಗುರುತಿಸುವುದು ಮತ್ತು ಸಾಮಾಜಿಕ ಮಾಧ್ಯಮ ಲೀಡ್‌ಗಳನ್ನು ಪರಿಶೀಲಿಸುವುದು ಹೇಗೆ ಎಂಬುದನ್ನು ನ್ಯೂಜ್ ರೂಮ್ ಗಳು ಕಲಿಸಬೇಕಾಗಿದೆ ಎಂದರು.

ಮಾಧ್ಯಮ ಲೋಕದ ಕಾರ್ಪೊರೇಟೀಕರಣದ ತಂದೊಡ್ಡಿರುವ ನೈತಿಕ ಸವಾಲುಗಳ ನಡುವೆಯೇ ಈಗ ಎಐ ಮತ್ತು ಆಧುನಿಕ ತಂತ್ರಜ್ಞಾನವೂ ಹೊಸ ಹೊಸ ನೈತಿಕ ಸವಾಲುಗಳನ್ನು ಮುಂದಿಟ್ಟಿದೆ. ಹೀಗಾಗಿ, ನೈತಿಕ ಮತ್ತು ತಾಂತ್ರಿಕ ಸವಾಲುಗಳ ಬಗ್ಗೆ ಅರ್ಥಪೂರ್ಣ ಚರ್ಚೆಗೆ ಸಮ್ಮೇಳನ ವೇದಿಕೆಯಾಗಲಿ ಎಂದು ನಾನು ಬಯಸುತ್ತೇನೆ ಎಂದರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸಮ್ಮೇಳನದ ಕಚೇರಿ ಉದ್ಘಾಟಿಸಿದರು. ಜಿಲ್ಲಾ ಉಸ್ತುವಾರಿ ಮಂತ್ರಿಗಳು ಹಾಗೂ ಸ್ವಾಗತ ಸಮಿತಿಯ ಅಧ್ಯಕ್ಷರಾದ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹಿಮ್ ಖಾನ್ ಮಾತನಾಡಿದರು. ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಿದರು. ಸಂಘದ ಜಿಲ್ಲಾಧ್ಯಕ್ಷ ಅನಂದ ದೇವಪ್ಪ ಪ್ರಾಸ್ತಾವಿಕ ಮಾತನಾಡಿದರು. ಬೀದರತ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ರಾಜ್ಯ ಸಂಘದ ಉಪಾಧ್ಯಕ್ಷರಾದ ಹೆಚ್.ಬು ಮದನಗೌಡ, ಮತ್ತಿಕೆರೆ ಜಯರಾಮ, ಅಜ್ಜಮಾಡ ರಮೇಶ ಕುಟ್ಟಪ್ಪ, ಕಾರ್ಯದರ್ಶಿಗಳಾದ ಪುಂಢಲಿಕ ಬಾಳೊಜಿ, ಸೋಮಶೇಖರ ಕೆರೆಗುಡು, ಖಜಾಂಚಿ ವಾಸುದೇವ ಹೊಳ್ಳ, ಮಾಜಿ ಉಪಾಧ್ಯಕ್ಷ ವೇದಿಕೆಯಲ್ಲಿದ್ದರು. ಸಂಘದ ಮಾಜಿ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ ಠಾಕೂರ್, ಅಡಾಕ ಸಮಿತಿ ಸದಸ್ಯರಾದ ಶಿವಕುಮಾರ ಸ್ವಾಮಿ, ಅಪ್ಪಾರಾವ ಸೌದಿ, ಮಾಜಿ ಜಿಲ್ಲಾಧ್ಯಕ್ಷರಾದ ಗಂಧರ್ವ ಸೇನಾ, ಮಲ್ಲಿಕಾರ್ಜುನ ಬಿರಾದಾರ, ಮಾಳಪ್ಪ ಅಡಸಾರೆ, ಬಸವರಾಜ ಕಾಮಶೆಟ್ಟಿ, ಸಿದ್ರಾಮಯ್ಯ ಸ್ವಾಮಿ, ಅಶೋಕಕುಮಾರ ಕರಂಜಿ, ಡಿ.ಕೆ ಗಣಪತಿ, ದೀಪಕ ವಾಲಿ, ಡಾ.ರಜನೀಶ ವಾಲಿ, ಶಶಿಕುಮಾರ ಪಾಟೀಲ ಸಂಗಮ ಹಾಗೂ ಇತರರಿದ್ದರು. ಮಾಜಿ ಜಿಲ್ಲಾಧ್ಯಕ್ಷ ಬಾಬುವಾಲಿ ಕಾರ್ಯಕ್ರಮ ನಿರೂಪಿಸಿ, ಪ್ರಥ್ವಿರಾಜ.ಎಸ್ ವಂದಿಸಿದರು.

# ದೇಶವ್ಯಾಪಿ ಭದ್ರತಾ ಎಚ್ಚರಿಕೆ: ಯಾದಗಿರಿಯಲ್ಲಿ ಕಟ್ಟುನಿಟ್ಟಿನ ತಪಾಸಣೆ



**ಯಾದಗಿರಿ, ಫೆ.24:** ದೇಶದ ವಿವಿಧ ಭಾಗಗಳಲ್ಲಿ ಸಂಭವನೀಯ ದಾಳಿಯ ಸಂಚುಗಳ ಕುರಿತು ಕೇಂದ್ರ ಭದ್ರತಾ ಸಂಸ್ಥೆಗಳಿಂದ ಜಾರಿಯಾದ ತೀವ್ರ ಎಚ್ಚರಿಕೆಯ ಹಿನ್ನೆಲೆ, ರಾಜ್ಯಾದ್ಯಂತ ಉನ್ನತ ಮಟ್ಟದ ಭದ್ರತಾ ಕ್ರಮಗಳನ್ನು ಜಾರಿಗೊಳಿಸಲಾಗಿದೆ. ಅದರ ಭಾಗವಾಗಿ ಯಾದಗಿರಿ ಜಿಲ್ಲೆಯಲ್ಲಿಯೂ ಪೊಲೀಸ್ ಇಲಾಖೆ ಅತ್ಯಂತ ಜಾಗೃತ ಸ್ಥಿತಿಗೆ ತೆರಳಿ, ಎಲ್ಲಾ ಪ್ರಮುಖ ಹಾಗೂ ಸೂಕ್ಷ್ಮ ಸ್ಥಳಗಳಲ್ಲಿ ವಿಶೇಷ ಕಣ್ಗಾವಲು ಮತ್ತು ತಪಾಸಣಾ ಕ್ರಮಗಳನ್ನು ಕೈಗೊಂಡಿದೆ.

ಮೇಲಧಿಕಾರಿಗಳಿಂದ ಬಂದಿರುವ ಸ್ಪಷ್ಟ ನಿರ್ದೇಶನದಂತೆ, ಜಿಲ್ಲೆಯಾದ್ಯಂತ ಜನಸಂದಣಿ ಪ್ರದೇಶಗಳು, ನ್ಯಾಯಾಂಗ ಕಟ್ಟಡಗಳು, ಸರ್ಕಾರಿ ಕಚೇರಿಗಳು, ಸಾರಿಗೆ ಕೇಂದ್ರಗಳು ಸೇರಿದಂತೆ ಪ್ರಮುಖ ಮೂಲಸೌಕರ್ಯಗಳ ಸುತ್ತಮುತ್ತ ಕಟ್ಟುನಿಟ್ಟಿನ ಭದ್ರತಾ ವಲಯವನ್ನು ರೂಪಿಸಲಾಗಿದೆ. ಈ ಕ್ರಮಗಳ ಅಂಗವಾಗಿ ಯಾದಗಿರಿ ಜಿಲ್ಲಾ ಮೀಸಲು ಪಡೆ, ಡಾಗ್ ಸ್ಕ್ವಾಡ್ ತಂಡವು ನಗರದ ಅತ್ಯಂತ ಮಹತ್ವದ ನ್ಯಾಯಾಂಗ ಕೇಂದ್ರವಾಗಿರುವ ಯಾದಗಿರಿ ಹೊಸ ನ್ಯಾಯಾಲಯ ಸಂಕೀರ್ಣದಲ್ಲಿ ಸೂಕ್ಷ್ಮ ಹಾಗೂ ಸವಿಸ್ತಾರ ತಪಾಸಣೆಯನ್ನು ನಡೆಸಿತು.

ನ್ಯಾಯಾಲಯ ಸಂಕೀರ್ಣದ ಪ್ರವೇಶ ದ್ವಾರಗಳು, ನ್ಯಾಯಾಂಗ ಕಕ್ಷೆಗಳು, ಸಾರ್ವಜನಿಕರ ನಿರೀಕ್ಷಣಾ ಮಂದಿರಗಳು, ದಾಖಲೆ ಸಂಗ್ರಹಣಾ ಕೊಠಡಿಗಳು, ವಾಹನ ನಿಲುಗಡೆ ಪ್ರದೇಶಗಳು ಸೇರಿದಂತೆ ಪ್ರತಿಯೊಂದು ಭಾಗದಲ್ಲೂ ಶ್ವಾನ ದಳದ ನೆರವಿನಿಂದ ತೀವ್ರ ಶೋಧ ಕಾರ್ಯಾಚರಣೆ ಜರುಗಿಸಲಾಯಿತು. ಯಾವುದೇ ಸಂಶಯಾಸ್ಪದ ವಸ್ತುಗಳು ಪತ್ತೆಯಾಗದಿದ್ದರೂ, ಮುನ್ನೆಚ್ಚರಿಕೆಯಾಗಿ ಕೈಗೊಳ್ಳಲಾದ ಈ ಕ್ರಮವು ಭದ್ರತಾ ವ್ಯವಸ್ಥೆಯ ಗಂಭೀರತೆಯನ್ನು ಸ್ಪಷ್ಟಪಡಿಸಿದೆ.

ಪೊಲೀಸ್ ಅಧಿಕಾರಿಗಳ ಪ್ರಕಾರ, "ಸಾಮಾಜಿಕ ಶಾಂತಿ ಮತ್ತು ಸಾರ್ವಜನಿಕರ ಜೀವ–ಸ್ವತ್ತಿನ ರಕ್ಷಣೆ ನಮ್ಮ ಪ್ರಾಥಮಿಕ ಕರ್ತವ್ಯ. ಯಾವುದೇ ರೀತಿಯ ಅಶಾಂತಿ ಅಥವಾ ಅವಾಂಛಿತ ಘಟನೆಗಳು ಸಂಭವಿಸದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕಠಿಣವಾಗಿ ಜಾರಿಗೊಳಿಸಲಾಗಿದೆ" ಎಂದು ತಿಳಿಸಿದ್ದಾರೆ.

ಇದೇ ವೇಳೆ, ಜಿಲ್ಲೆಯ ಪ್ರಮುಖ ಬಸ್ ನಿಲ್ದಾಣಗಳು, ರೈಲು ನಿಲ್ದಾಣಗಳು, ವಾಣಿಜ್ಯ ಮಳಿಗೆಗಳು ಹಾಗೂ ಶಿಕ್ಷಣ ಸಂಸ್ಥೆಗಳ ಸುತ್ತಮುತ್ತ ಹೆಚ್ಚುವರಿ ಪೊಲೀಸ್ ಬಿಗಿ ಬಂದೋಬಸ್ತ್ ಕಲ್ಪಿಸಲಾಗಿದ್ದು, ರಾತ್ರಿ ಪಹರೆ ಹಾಗೂ ಅಚಾನಕ್ ತಪಾಸಣೆ ಕಾರ್ಯಾಚರಣೆಗಳನ್ನೂ ವಿಸ್ತರಿಸಲಾಗಿದೆ.

ಸಾರ್ವಜನಿಕರು ಆತಂಕಕ್ಕೆ ಒಳಗಾಗಬಾರದು; ಆದರೆ ಯಾವುದೇ ಅನುಮಾನಾಸ್ಪದ ಚಟುವಟಿಕೆಗಳು ಕಂಡುಬಂದಲ್ಲಿ ತಕ್ಷಣವೇ ಸಮೀಪದ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಇಲಾಖೆ ಮನವಿ ಮಾಡಿದೆ. ಭದ್ರತೆ ಹಾಗೂ ಶಾಂತಿ ಕಾಪಾಡುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲೂ ನಿರಂತರ ತಪಾಸಣೆ ಮತ್ತು ನಿಗಾವಹಿಸುವ ಕ್ರಮಗಳು ಮುಂದುವರಿಯಲಿವೆ ಎಂದು ತಿಳಿದುಬಂದಿದೆ.

# ಬಜೆಟ್ ಮಂಡನೆ ಬಳಿಕ ಮತ್ತಷ್ಟು ಜೋರಾಗಲಿದೆ ಸಿಎಂ ಕುರ್ಚಿ ಕದನ..!!

**ಬೆಂಗಳೂರು, ಫೆ.24–** ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕಾಗಿ ಸಿದ್ದರಾಮಯ್ಯ ಬಣ ಪಟ್ಟು ಹಿಡಿದಿರುವುದರಿಂದ ಬಜೆಟ್ ಮಂಡನೆಯ ಬಳಿಕ ನಾಯಕತ್ವ ಬದಲಾವಣೆಯ ಜಿದ್ದಾಜಿದ್ದಿಯೂ ಹೆಚ್ಚಾಗಲಿದೆ.

ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಹುದ್ದೆಯ ಮೇಲೆ ಕಣ್ಣಿಟ್ಟು ನಾನಾ ರೀತಿಯ ಕಸರತ್ತುಗಳನ್ನು ನಡೆಸುತ್ತಿರುವ ನಡುವೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಣ ಕೆಪಿಸಿಸಿ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಪಕ್ಷದ ಸಾರಥ್ಯವನ್ನು ತಮಗೆ ವಹಿಸುವಂತೆ ಹೈಕಮಾಮಡ್ ಮುಂದೆ ಬೇಡಿಕೆ ಮಂಡಿಸಿದ್ದಾರೆ. ಇದು ಎರಡು ಬಣಗಳ ನಡುವಿನ ಜಿದ್ದಾಜಿದ್ದಿಯನ್ನು ಮತ್ತಷ್ಟು ಹೆಚ್ಚಿಸಿದೆ. ರಾಜ್ಯ ಸರ್ಕಾರದ ಬಜೆಟ್ ಮಂಡನೆಯ ಬಳಿಕ ರಾಜ್ಯ ರಾಜಕಾರಣ ಬೇರೆಯದೇ ರೀತಿಯ ಆಯಾಮ ಪಡೆದುಕೊಳ್ಳುವ ಸಾಧ್ಯತೆ ಇದೆ.

ಸಿದ್ದರಾಮಯ್ಯ ಅವರ ನಾಯಕತ್ವ ಅಭಾದಿತ ಎಂದು ಭಾವಿಸಿದ್ದವರಿಗೆ ಡಿ.ಕೆ.ಶಿವಕುಮಾರ್ ಬಂಡಾಯ ಬಿಸಿ ತುಪ್ಪವಾಗಿದೆ. ಹೆಚ್ಚುವರಿ ಉಪಮುಖ್ಯಮಂತ್ರಿ ಹುದ್ದೆಗಳ ಸೃಷ್ಟಿ, ಒಬ್ಬರಿಗೆ ಒಂದೇ ಹುದ್ದೆ ಎಂಬ ನಿಯಮ ಪಾಲನೆಯಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ ಪಟ್ಟು ಹಿಡಿದಿದೆ.

ಇದಕ್ಕೆ ನೇರಾತಿನೇರ ಟಕ್ಕರ್ ನೀಡುತ್ತಿರುವ ಡಿ.ಕೆ.ಶಿವಕುಮಾರ್ ಅವರು, 2023ರ ವಿಧಾನಸಭೆ ಚುನಾವಣೆ ಫಲಿತಾಂಶದ ಬಳಿಕ ದೆಹಲಿಯಲ್ಲಾಗಿರುವ ಒಪ್ಪಂದದಂತೆ ನಮಗೆ ಮುಖ್ಯಮಂತ್ರಿ ಹುದ್ದೆಯನ್ನು ಬಿಟ್ಟು ಕೊಡಬೇಕು ಎಂದು ಪಟ್ಟು ಹಿಡಿದಿದ್ದಾರೆ.

ಇತ್ತಿಚೆಗೆ ದೆಹಲಿಗೆ ಭೇಟಿ ನೀಡಿದ್ದ ಸಚಿವ ಸತೀಶ್ ಜಾರಕಿಹೊಳಿ ಮಾಜಿ ಸಚಿವ ಕೆ.ಎನ್.ರಾಜಣ್ಣ ಮತ್ತಿಬ್ಬರು ಶಾಸಕರ ಜೊತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ್ದಾರೆ. ಈ ವೇಳೆ ನಡೆದ ಮಾತುಕತೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ತಮಗೆ ಬಿಟ್ಟು ಕೊಡುವಂತೆ ಮನವಿ ಮಾಡಿದ್ದಾರೆ ಎನ್ನಲಾಗಿದೆ.



2028ರ ವಿಧಾನಸಭೆ ಚುನಾವಣೆಯ ಚುನಾವಣೆಯ ಮುಖ್ಯಮಂತ್ರಿ ಹುದ್ದೆಯ ಮೇಲೆ ಕಣ್ಣಿಟ್ಟಿರುವ ಸತೀಶ್ ಜಾರಕಿಹೊಳಿ, ಕೆಪಿಸಿಸಿ ಅಧ್ಯಕ್ಷರಾಗುವ ಮೂಲಕ ಮುಖ್ಯಮಂತ್ರಿ ಹುದ್ದೆಗೆ ಹತ್ತಿರವಾಗುವ ದೂರಾಲೋಚನೆ ಹೊಂದಿದ್ದಾರೆ. ಚುನಾವಣೆ ಸಂದರ್ಭದಲ್ಲಿ ಏಕಾಏಕಿ ಪಕ್ಷದ ಅಧ್ಯಕ್ಷ ಸ್ಥಾನ ಕೇಳಿದರೆ ನಕಾರಾತಕ ಅಭಿಪ್ರಾಯಗಳು ಸೃಷ್ಟಿಯಾಗಬಹುದು ಅಥವಾ ಆಗ ಬೇರೆ ಯಾರೋ ಪಕ್ಷದ ಅಧ್ಯಕ್ಷರಾಗಿದ್ದರೆ ಸಿಎಂ ಹುದ್ದೆಗೆ ಪೈಪೋಟಿ ಹೆಚ್ಚಬಹುದು ಎಂಬ ಕಾರಣಕ್ಕೆ ಈಗೀನಿಂದಲೇ ತಾಲೀಮು ಆರಂಭಿಸಿದ್ದಾರೆ.

ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ತಮಗೆ ವಹಿಸಿದರೆ ಮುಂದೆ ನಡೆಯುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಪಕ್ಷವನ್ನು ಗೆಲ್ಲಿಸಿಕೊಂಡು ಬರುವುದಾಗಿ ಭರವಸೆ ನೀಡಿದ್ದಾರೆ. ಡಿ.ಕೆ.ಶಿವಕುಮಾರ್ 2023ರಿಂದ ಉಪಮುಖ್ಯಮಂತ್ರಿ ಹುದ್ದೆ ಹಾಗೂ ಪಕ್ಷದ ಅಧ್ಯಕ್ಷ ಸ್ಥಾನ ಎರಡನ್ನು ನಿಭಾಯಿಸುತ್ತಿದ್ದಾರೆ. ಒಬ್ಬರಿಗೆ ಒಂದೇ ಹುದ್ದೆ ಎಂಬ ನಿಯಮದ ಪ್ರಕಾರ ಎರಡರಲ್ಲಿ ಒಂದು ಹುದ್ದೆಯನ್ನು ಮಾತ್ರ ಡಿ.ಕೆ.ಶಿವಕುಮಾರ್ ನಿಭಾಯಿಸಬೇಕು. ಮೂರು ವರ್ಷಗಳಿಂದಲೂ ಎರಡು ಹುದ್ದೆಗಳಲ್ಲಿ ಕಾರುಬಾರು ನಡೆಸುತ್ತಿದ್ದಾರೆ.

ಹೆಚ್ಚುವರಿ ಉಪಮುಖ್ಯಮಂತ್ರಿ ಹುದ್ದೆಗಳನ್ನು ಸೃಷ್ಟಿ ಮಾಡಿ, ಇಲ್ಲವೇ ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ಬೇರೆಯವರಿಗೆ ಬಿಟ್ಟುಕೊಡಿ ಎಂದು ಕೆ.ಎನ್.ರಾಜಣ್ಣ ಹೈಕಮಾಂಡ್ ಮುಂದೆ ಪ್ರತಿಪಾದಿಸಿದ್ದಾರೆ. ಜೊತೆಗೆ ತಮಗೆ ಮತ್ತೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಎಐಸಿಸಿ ಅಧ್ಯಕ್ಷರು ನಿಯೋಗ ಅಭಿಪ್ರಾಯ ಕೇಳಿದ ಬಳಿಕ ರಾಜ್ಯದಲ್ಲಿ ಅನಗತ್ಯವಾಗಿ ಗೊಂದಲ ಸೃಷ್ಟಿಸಲು ಅವಕಾಶ ನೀಡಬೇಡಿ. ಯಾರಿಗೆ ಯಾವ ಹುದ್ದೆ ನೀಡಬೇಕು ಎಂಬುದನ್ನು ಹೈಕಮಾಂಡ್ ತೀರ್ಮಾನಿಸುತ್ತದೆ. ಪಕ್ಷವಹಿಸಿದ ಜವಾಬ್ದಾರಿಯನ್ನು ನಿಭಾಯಿಸುವ ಕಡೆಗೆ ಗಮನ ಕೊಡಿ ಎಂದು ಸಲಹೆ ನೀಡಿದ್ದಾರೆ ಎನ್ನಲಾಗಿದೆ.

ದೆಹಲಿಯಲ್ಲಿ ನಡೆದ ಮಾತುಕತೆಯ ಮಾಹಿತಿ ಪಡೆದಿರುವ ಡಿ.ಕೆ. ಶಿವಕುಮಾರ್ ಬಣ ಅಸಮಾಧಾನದಿಂದ ಕುದಿಯಲಾರಂಭಿಸಿದೆ. ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಬೇಡಿಕೆ ಇಟ್ಟಿರುವವರು ಮತ್ತು ಸಿದ್ದರಾಮಯ್ಯ ಅವರ ಪರವಾಗಿ ವಾದಿಸುತ್ತಿರುವ ಬಹುತೇಕ ನಾಯಕರು ವಲಸಿಗರಾಗಿದ್ದಾರೆ. ಕಾಂಗ್ರೆಸ್ ಪಕ್ಷಕ್ಕೆ ಬಂದ ಅತ್ಯಲ್ಪ ಸಮಯದಲ್ಲೆ ಸಚಿವ ಸ್ಥಾನ ಸೇರಿದಂತೆ ಪ್ರಮುಖ ಹುದ್ದೆಗಳನ್ನು ಅನುಭವಿಸಿದ್ದಾರೆ. ವಲಸಿಗರಿಗೆ ಮಣೆ ಹಾಕುತ್ತಾ ಹೋದರೆ ಪಕ್ಷ ನಿಷ್ಠರಿಗೆ ವಿಶ್ವಾಸ ಕುಗ್ಗಲಿದೆ ಎಂಬ ಆತಂಕವನ್ನು ಡಿ.ಕೆ.ಶಿವಕುಮಾರ್ ಬಣ ವ್ಯಕ್ತ ಪಡಿಸಿದೆ.

ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನದಲ್ಲಿ ಎಂಟು ವರ್ಷ ಪೂರೈಸಿದ್ದಾರೆ. ಪಕ್ಷ ಸಂಘಟಿಸುವ ಶ್ರಮದಾಯಕ ಜವಾಬ್ದಾರಿಯನ್ನು ಯಾವತ್ತೂ ತೆಗೆದುಕೊಂಡಿಲ್ಲ. ಡಿಕೆ ಶಿವಕುಮಾರ್ ಅವರ ಅಧಿಕಾರ ಅವಧಿಯನ್ನು ಲೆಕ್ಕ ಹಾಕಲಾಗುತ್ತಿದೆ. ಕಾಂಗ್ರೆಸ್ ಪಕ್ಷವನ್ನು ಸೋಲಿಸುತ್ತೇನೆ ಎಂದು ಬಹಿರಂಗವಾಗಿ ಹೇಳಿಕೆ ನೀಡುವ ರಾಜಣ್ಣಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಡ ಹಾಕಲಾಗುತ್ತಿದೆ ಎಂಬ ಅಸಮಾಧಾನ ಕೇಳಿ ಬರುತ್ತಿವೆ.

ರಾಜ್ಯ ಬಜೆಟ್ ಮಂಡನೆ ಬಳಿಕ ನಾಯಕತ್ವ ಬದಲಾವಣೆಯಾಗಲೇಬೇಕು ಎಂದು ಡಿ.ಕೆ.ಶಿವಕುಮಾರ್ ಪಟ್ಟು ಹಿಡಿಯುವ ಸಾಧ್ಯತೆ ಇದೆ. ಇದು ಬಹಿರಂಗವಾದ ರಾಜಕೀಯ ಸಮರಕ್ಕೆ ಹಾದಿ ಮಾಡಿಕೊಡಲಿದೆ ಎಂಬ ಅಂದಾಜುಗಳಿವೆ.

# ಅಗ್ನಿಶಾಮಕ ಇಲಾಖೆಯಲ್ಲಿ ಖಾಲಿ ಹುದ್ದೆ ಶೀಘ್ರ ಭರ್ತಿ: ಪರಂ

**ಬೆಂಗಳೂರು ಫೆ. 24–** ಅಗ್ನಿಶಾಮಕ ಹಾಗೂ ತುರ್ತು ಸೇವೆಗಳ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡುವುದಾಗಿ ಗೃಹ ಸಚಿವ ಡಾಕ್ಟರ್ ಜಿ ಪರಮೇಶ್ವರ್ ಹೇಳಿದರು.

ಬೆಂಗಳೂರಿನ ಬನ್ನೇರುಘಟ್ಟ ರಸ್ತೆಯ ಆರ್.ಎ.ಮುಂಡ್ಕುರ್ ಅಗ್ನಿಶಾಮಕ ತರಬೇತಿ ಅಕಾಡೆಮಿಯಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವಾ ಇಲಾಖೆ, ಗೃಹರಕ್ಷಕ ದಳ, ಪೌರರಕ್ಷಣೆ ಮತ್ತು ಎಸ್‌ಡಿಆರ್‌ಎಫ್ ಅಧಿಕಾರಿ, ಸಿಬ್ಬಂದಿಗಳಿಗೆ 'ಮುಖ್ಯಮಂತ್ರಿಗಳ ಪದಕ' ಪ್ರದಾನ ಹಾಗೂ 40 ಹೊಸ ಅಗ್ನಿಶಾಮಕ ಜಲ ವಾಹನಗಳನ್ನು ಹಸ್ತಾಂತರಿಸಿ ಮಾತನಾಡಿದ ಅವರು ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಯಲ್ಲಿ 1600ಕ್ಕೂ ಹೆಚ್ಚು ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಬೇಕಿದೆ. ಈ ಬಗ್ಗೆ ಮುಖ್ಯಮಂತ್ರಿಯವರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. 1600 ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಯು ಉತ್ತಮ ಕೆಲಸದ ಮೂಲಕ ರಾಷ್ಟ್ರ ಮಟ್ಟದಲ್ಲಿ ಜನಮನ್ನಣೆ ಪಡೆದಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು ಹೇಳಿದರು.ಇಲಾಖೆಯು ರಾಷ್ಟ್ರಮಟ್ಟದಲ್ಲಿ ಹೆಸರು ಗಳಿಸಿ, ರಾಜ್ಯಕ್ಕೆ ಗೌರವ ಸಂಪಾದನೆ ಮಾಡಿರುವುದನ್ನು ರಾಜ್ಯ ಸರ್ಕಾರ ಮತ್ತು ಜನಸಮುದಾಯ ಗಮನಿಸಿದೆ ಎಂದು ಹೇಳಿದರು.

ಹೊಸ ತಾಲ್ಲೂಕುಗಳ ಪೈಕಿ 15 ಕಡೆ ಅಗ್ನಿಶಾಮಕ ಠಾಣೆಗಳನ್ನು ಸ್ಥಾಪಿಸಲು ಮುಖ್ಯಮಂತ್ರಿಯವರನ್ನು ಕೋರಿದ್ದೇನೆ. ಪೊಲೀಸ್ ಗೃಹ ಯೋಜನೆಯಡಿ 40 ಸಾವಿರ ಮನೆ ಕಟ್ಟಿದ್ದೇವೆ. ಅದೇ ಮಾದರಿಯಲ್ಲಿ ಅಗ್ನಿಶಾಮಕ ಸಿಬ್ಬಂದಿಗಳಿಗೆ ವಸತಿ ಗೃಹ ಕಲ್ಪಿಸುವ ತೀರ್ಮಾನ ಮಾಡಲಾಗಿದೆ. ಇದಕ್ಕೆ ಹಣ ಒದಗಿಸಲಾಗುವುದು ಎಂದರು.

ಬೆಂಗಳೂರಿನಲ್ಲಿ ಬಹುಮಹಡಿ ಕಟ್ಟಡಗಳು ಹೆಚ್ಚಾಗುತ್ತಿವೆ. ಅಗ್ನಿ ಅವಘಡಗಳು ಸಂಭವಿಸಿದ ಸಂದರ್ಭದಲ್ಲಿ ನಿಯಂತ್ರಿಸಲು ಆಧುನಿಕ ಮತ್ತು ಸುಸಜ್ಜಿತ ಸಲಕರಣೆ, ವಾಹನಗಳನ್ನು ಒದಗಿಸಲಾಗಿದೆ. ಪ್ರಥಮ ಬಾರಿಗೆ 90 ಮೀಟರ್ ಎತ್ತರ ತಲುಪಬಲ್ಲ ಏರಿಯಲ್ ಲ್ಯಾಡರ್ ಫ್ಲಾಟ್‌ಫಾರ್ಮ್ ವಾಹನ ಮಾದರಿ ಅಗ್ನಿಶಾಮಕ ವಾಹನವಾಗಿದೆ.

15ನೇ ಹಣಕಾಸಿನ ಯೋಜನೆಯಡಿ 329 ಕೋಟಿ ರೂ. ಒದಗಿಸಲಾಗಿತ್ತು. 21 ಅಗ್ನಿಶಾಮಕ ಠಾಣೆ ನಿರ್ಮಿಸಲು 98 ಕೋಟಿ ರೂ. ಖರ್ಚು ಮಾಡಲಾಗಿದೆ. ಆಧುನಿಕ ಉಪಕರಣಗಳ ಖರೀದಿ, ತರಬೇತಿ ಕೇಂದ್ರದ ಉನ್ನತಿಕರಣಕ್ಕೆ ಕ್ರಮ ವಹಿಸಲಾಗಿದೆ. ಎಂದು ಹೇಳಿದರು

ಅಗ್ನಿಶಾಮಕ ಮತ್ತು ತುರ್ತುಸೇವಾ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಶಿಸ್ತಿನ ಸಿಪಾಯಿಗಳು. ಪೊಲೀಸ್ ಇಲಾಖೆಯ ಜೊತೆಜೊತೆಯಾಗಿ ಅಷ್ಟೇ ಶಿಸ್ತನ್ನು ಕಾಪಾಡಿಕೊಂಡು ಬಂದಿದ್ದೀರಿ. ವಿಪತ್ತಿನ ಸಂದರ್ಭದಲ್ಲಿ ಸ್ವಯಂಸ್ಫೂರ್ತಿಯಿಂದ ಕೆಲಸ ಮಾಡಲು ಶ್ರಮಿಸಲಾಗಿದೆ. ಇದನ್ನು ಸಮಾಜ ಗುರುತಿಸಿದೆ. ಇಡೀ ದೇಶದಲ್ಲಿ ಕರ್ನಾಟಕ ಅಗ್ನಿಶಾಮಕ ಮತ್ತು ಇತರೆ ಇಲಾಖೆಗಳು ಮಾದರಿಯಾಗಿದೆ ಎಂದರು.

ಪ್ರತಿದಿನ ಹಲವು ದುರಂತಗಳನ್ನು ನೋಡುತ್ತೇವೆ. ನಗರ ಪ್ರದೇಶಗಳಲ್ಲಿ ಹೆಚ್ಚಿನ ಅವಘಡಗಳು ಸಂಭವಿಸುತ್ತವೆ. ತುರ್ತು ಸಂದರ್ಭದಲ್ಲಿ ಪ್ರಾಣವನ್ನು ಒತ್ತೆ ಇಟ್ಟು, ಸಾರ್ವಜನಿಕರ ಆಸ್ತಿ ಮತ್ತು ನಾಗರಿಕರ ಪ್ರಾಣ ರಕ್ಷಣೆ ಮಾಡುವ ಕೆಲಸ ಮಾಡಿದ್ದೀರಿ. ಪ್ರವಾಹಗಳು ಉಂಟಾದ ಸಂದರ್ಭದಲ್ಲಿ ಜೀವದ ಹಂಗು ತೊರೆದು ಜನರನ್ನು ಕಾಪಾಡಿರುವುದನ್ನು ನೆನೆಯುತ್ತೇನೆ.

ಮಡಿಕೇರಿಯಲ್ಲಿ ಸಂಭವಿಸಿದ ಪ್ರವಾಹದ ವೇಳೆ ಒಂಟಿಯಾಗಿದ್ದ ಮನೆಗಳಲ್ಲಿದ್ದ ಜನರನ್ನು ರಕ್ಷಣೆ ಮಾಡಲು ತೆಗೆದುಕೊಂಡು ನಿರ್ಧಾರ ಮತ್ತು ಪ್ರಯತ್ನಗಳು ಅತ್ಯಂತ ಶ್ಲಾಘನೀಯ. ನಿಮ್ಮ



ಕೆಲಸ ಸುಲಭ ಎಂದು ಹೇಳಲಾಗುವುದಿಲ್ಲ. ದೇಶದ ದಕ್ಷಿಣ ಭಾಗದ ರಾಜ್ಯಗಳಲ್ಲಿ ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಅತ್ಯಂತ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿಅಗ್ನಿಶಾಮಕ ಹಾಗೂ ತುರ್ತು ಸೇವೆಗಳ ಪೊಲೀಸ್ ಮಹಾನಿರ್ದೇಶಕ ಪ್ರಶಾಂತ್ ಕುಮಾರ್ ಠಾಕೂರ್ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರಾದ ಶರತ್ ಚಂದ್ರ ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು

# ಟ್ರಂಪ್ ಸುಂಕ ಬೆದರಿಕೆ ಷೇರು ಪೇಟೆ ತಲ್ಲಣ

**ಮುಂಬೈ,ಫೆ.24–** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಂದು ಸುಂಕ ಬೆದರಿಕೆ ಹಾಕಿದ ಹಿನ್ನೆಲೆಯಲ್ಲಿ ಷೇರುಪೇಟೆ ತಲ್ಲಣವಾಗಿದೆ. ಇದರಿಂದ ಷೇರುದಾರರಲ್ಲಿ ಆತಂಕ ಮನೆ ಮಾಡಿದೆ.

ದಿನದ ಆರಂಭಿಕ ವಹಿವಾಟಿನಲ್ಲಿ ಭಾರತೀಯ ಷೇರು ಸೂಚ್ಯಂಕಗಳಾದ ಸೆನ್ಸೆಕ್ಸ್ ಮತ್ತು ನಿಫ್ಟಿ ಶೇ 1 ರಷ್ಟು ಕುಸಿತ ಕಂಡವು. ಎಐ ಬೆಳವಣಿಗೆ ಆತಂಕಗಳ ನಡುವೆ ಐಟಿ ಷೇರುಗಳಲ್ಲಿ ತೀವ್ರ ಮಾರಾಟ ಕುಸಿತಕ್ಕೆ ಕಾರಣವಾಗಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಇತ್ತೀಚಿನ ಸುಂಕದ ಹೇಳಿಕೆಗಳ ನಂತರ ಕಚ್ಚಾ ತೈಲ ಬೆಲೆ ಏರಿಕೆ ಮತ್ತು ಜಾಗತಿಕ ವ್ಯಾಪಾರದ ಬಗ್ಗೆ ಮತ್ತೆ ಹೂಡಿಕೆದಾರರ ಭಾವನೆಯ ಮೇಲೆ ಪರಿಣಾಮ ಬೀರಿವೆ ಎಂದು ವ್ಯಾಪಾರಿಗಳು ಕಳವಳ ವ್ಯಕ್ತಪಡಿಸಿದ್ದಾರೆ.

30 ಷೇರುಗಳ ಬಿಎಸ್‌ಇ ಸೆನ್ಸೆಕ್ಸ್ 813.13 ಅಂಶಗಳಷ್ಟು, ಅಂದರೆ ಶೇ 0.97 ರಷ್ಟು ಕುಸಿದು 82,481.53ರಲ್ಲಿ ವಹಿವಾಟು ಆರಂಭಿಸಿತ್ತು. 50–ಷೇರುಗಳ ಎನ್‌ಎಸ್‌ಇ ನಿಫ್ಟಿ 230.15 ಅಂಶ ಅಥವಾ ಶೇ 0.89 ರಷ್ಟು ಕುಸಿದು 25,482.85ರಲ್ಲಿ ವಹಿವಾಟು ಆರಂಭಿಸಿತ್ತು.

ಸೆನ್ಸೆಕ್ಸ್ ಸಂಸ್ಥೆಗಳ ಪೈಕಿ ಎಟರ್ನಲ್ ಶೇ 3.82ರಷ್ಟು ಕುಸಿದಿದ್ದು, ನಂತರದ ಸ್ಥಾನದಲ್ಲಿ ಎಚ್‌ಸಿಎಲ್ ಟೆಕ್ನಾಲಜೀಸ್, ಇನ್ಫೋಸಿಸ್, ಟೆಕ್ ಮಹೀಂದ್ರಾ, ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್, ಭಾರ್ತಿ ಏರ್‌ಟೆಲ್, ಬಜಾಜ್ ಫೈನಾನ್ಸ್, ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್, ಟ್ರೆಂಟ್, ಅದಾನಿ ಪೋರ್ಟ್ಸ್, ಐಟಿಸಿ ಮತ್ತು ಟೈಟಾನ್ ಷೇರುಗಳು ಇವೆ.

ಬ್ಯಾಂಕ್, ಪವರ್‌ಗ್ರಿಡ್, ಏಷ್ಯನ್ ಪೇಂಟ್ಸ್, ಕೋಟಕ್ ಮಹೀಂದ್ರ ಬ್ಯಾಂಕ್ ಮತ್ತು ಟಾಟಾ ಸ್ಟೀಲ್ ಷೇರುಗಳು ಲಾಭ ಗಳಿಸಿವೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇಂದು ಮಾಡಲಿರುವ ಭಾಷಣದ ಬಗ್ಗೆ ಜಾಗತಿಕವಾಗಿ ಹೂಡಿಕೆದಾರರು ಕುತೂಹಲದಿಂದ ವೀಕ್ಷಿಸುತ್ತಿದ್ದಾರೆ ಎಂದು ವರದಿ ತಿಳಿಸಿದೆ.

ಅಮೆರಿಕ ಸುಪ್ರೀಂ ಕೋರ್ಟ್ ತೀರ್ಪಿನ ನಂತರ, ಐರೋಪ್ಯ ಒಕ್ಕೂಟ, ಬ್ರಿಟನ್‌ನಂತಹ ಜಾಗತಿಕ ಮಿತ್ರರಾಷ್ಟ್ರಗಳು ಅಮೆರಿಕ ಜೊತೆಗಿನ ವ್ಯಾಪಾರ ಒಪ್ಪಂದಗಳ ಮರುಪರಾಮರ್ಶೆಗೆ ಮುಂದಾಗಿವೆ ಎಂಬ ವರದಿಗಳ ಬೆನ್ನಲ್ಲೇ ಟ್ರಂಪ್ ಭಾರಿ ಸುಂಕ ಏರಿಕೆಯ ಬೆದರಿಕೆ ಹಾಕಿದ್ದಾರೆ. ಇದೂ ಮಾರುಕಟ್ಟೆ ಮೇಲೆ ಪರಿಣಾಮ ಬೀರಿದೆ ಎನ್ನುತ್ತಾರೆ ತಜ್ಞರು. ಭಾರತವೂ ಸಹ ಮಧ್ಯಂತರ ವ್ಯಾಪಾರ ಒಪ್ಪಂದದ ಕುರಿತಾದ ಮಾತುಕತೆಗೆ ನಿಗದಿಯಾಗಿದ್ದ ಸಭೆಯನ್ನು ಮುಂದೂಡಿತ್ತು.

ಏಷ್ಯಾದ ಮಾರುಕಟ್ಟೆಗಳ ಪೈಕಿ ದಕ್ಷಿಣ ಕೊರಿಯಾದ ಕಾಸ್ಪಿ, ಶಾಂಘೈನ ಎಸ್‌ಎಸ್‌ಇ ಕಾಂಪೊಸಿಟ್ ಇಂಡೆಕ್ಸ್ ಮತ್ತು ಜಪಾನ್‌ನ ನಿಕ್ಕಿ 225 ಬೆಂಚ್‌ಮಾರ್ಕ್‌ಗಳು ಏರಿಕೆಯೊಂದಿಗೆ ವಹಿವಾಟು ನಡೆಸುತ್ತಿದ್ದರೆ, ಹಾಂಗ್ ಕಾಂಗ್‌ನ ಹ್ಯಾಂಗ್ ಇಳಿಕೆ ಕಂಡಿದೆ. ವಹಿವಾಟಿನಲ್ಲಿ ಅಮೆರಿಕ ಷೇರು ಮಾರುಕಟ್ಟೆಯಲ್ಲಿ ಸುಮಾರು ಶೇ 2ರಷ್ಟು ಕುಸಿತದೊಂದಿಗೆ ಕೊನೆಗೊಂಡಿತ್ತು.

ವಿದೇಶಿ ಸಾಂಸ್ಥಿಕ ಹೂಡಿಕೆದಾರರು 3,483.70 ಕೋಟಿ ಮೌಲ್ಯದ ಷೇರುಗಳನ್ನು ಖರೀದಿಸಿದರೆ, ದೇಶೀಯ ಸಾಂಸ್ಥಿಕ ಹೂಡಿಕೆದಾರರು1, 292.24 ಕೋಟಿ ಮೌಲ್ಯದ ಷೇರುಗಳನ್ನು ಮಾರಾಟ ಮಾಡಿದ್ದಾರೆ ಎಂದು ವಿನಿಮಯ ದತ್ತಾಂಶಗಳು ತಿಳಿಸಿವೆ.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**
**6360866626**

# ನಕಲಿ ಪಾವತಿ ಆಪ್‌ಗಳಿಂದ ಸುರಕ್ಷಿತವಾಗಿರಲು ವ್ಯಾಪಾರಿಗಳಿಗೆ ಸಹಾಯ– ಸರಳ ಮಾರ್ಗದರ್ಶಿ

**ಬೆಂಗಳೂರು,ಫೆ24–** ನಕಲಿ ಪಾವತಿ ಆಪ್‌ಗಳು ಅಧಿಕೃತ ಪಾವತಿ ಅಪ್ಲಿಕೇಶನ್‌ಗಳ ನಕಲುಗಳಾಗಿವೆ. ಅವು ಜನಪ್ರಿಯ ಪಾವತಿ ಆಯಪ್‌ಗಳ ಯೂಸರ್ ಇಂಟರ್‌ಫೇಸ್ ಬಣ್ಣ ಮತ್ತು ಒಟ್ಟಾರೆ ಅನುಭವವನ್ನು ನಿಕಟವಾಗಿ ಹೋಲುತ್ತವೆ.

ಅವು ಸಂಪೂರ್ಣ ಪಾವತಿ ವಹಿವಾಟು ಪ್ರಕ್ರಿಯೆಯನ್ನು ಅನುಕರಿಸುತ್ತವೆ ಇದರಿಂದಾಗಿ ಒಮ್ಮೆಗೆ ಅವುಗಳನ್ನು ನಕಲಿ ಎಂದು ಗುರುತಿಸುವುದು ಕಷ್ಟವಾಗುತ್ತದೆ.

ಈ ಕೆಲವು ಮೋಸದ ಆಪ್‌ಗಳು ಪಾವತಿ ಸ್ವೀಕರಿಸಲಾಗಿದೆ ಎಂದು ತಪ್ಪಾಗಿ ಸೂಚಿಸಲು 'ಬೀಪ್' ಅಥವಾ 'ಚೈಮ್' ನಂತಹ ಪಾವತಿ ಅಧಿಸೂಚನೆಯ ಧ್ವನಿಯನ್ನು ಅನುಕರಿಸುವ ಮೂಲಕ ಇನ್ನಷ್ಟು ನಂಬಿಕೆ ಹುಟ್ಟಿಸುತ್ತವೆ. ಅಲ್ಲದೆ, ಯಶಸ್ವಿ ವಹಿವಾಟನ್ನು ಸೂಚಿಸಲು ಅವು ನಂಬಲರ್ಹವಾದ ಪಾವತಿ ಮಾಹಿತಿಯನ್ನು ಸೃಷ್ಟಿಸಬಲ್ಲವು, ಇದು ನಕಲಿ ಪಾವತಿ ಆಯಪ್ ಎಂದು ಗುರುತಿಸುವುದನ್ನು ಇನ್ನಷ್ಟು ಸವಾಲಾಗಿಸುತ್ತದೆ.

ವಂಚಕರು ತಾವು ವಹಿವಾಟನ್ನು ಪೂರ್ಣಗೊಳಿಸಿದ್ದೇವೆ ಎಂದು ಮುಗ್ಧ ಜನರನ್ನು ನಂಬಿಸಲು ನಕಲಿ ಪಾವತಿ ಆಪ್‌ಗಳನ್ನು ಬಳಸಿ ಬಲಿಪಶುವಾಗಿಸುತ್ತಾರೆ. ವಾಸ್ತವದಲ್ಲಿ, ಅವರು ಪಾವತಿ ವಹಿವಾಟನ್ನು ಕೇವಲ ಅನುಕರಿಸುವ ನಕಲಿ ಆಪ್ ಅನ್ನು ಬಳಸುತ್ತಾರೆ, ಇದರಿಂದ ಬಲಿಪಶುಗಳಿಗೆ ವಹಿವಾಟು ನಕಲಿ ಎಂದು ತಡವಾಗಿ ಅರಿವಾಗುತ್ತದೆ.

ನಕಲಿ ಪಾವತಿ ಆಯಪ್‌ಗಳಿಂದ ಜಾಗರೂಕರಾಗಿರಲು ಮತ್ತು ಸುರಕ್ಷಿತವಾಗಿರಲು ನಿಮಗೆ ಸಹಾಯ ಮಾಡುವ ಕೆಲವು ಸಲಹೆಗಳು ಇಲ್ಲಿವೆ:

ವಹಿವಾಟಿನ ಇತಿಹಾಸವನ್ನು ಪರಿಶೀಲಿಸಿ: ಯಾವಾಗಲೂ ನಿಮ್ಮ ಪಾವತಿ ಆಪ್ ಅಥವಾ ಬ್ಯಾಂಕ್ ಖಾತೆಯ ಮೂಲಕ ವಹಿವಾಟುಗಳನ್ನು ಪರಿಶೀಲಿಸಿ. ಕೇವಲ ಸ್ಕ್ರೀನ್‌ಶಾಟ್‌ಗಳು ಅಥವಾ ಅಧಿಸೂಚನೆಗಳನ್ನು ಮಾತ್ರ ಅವಲಂಬಿಸಬೇಡಿ.

ವಹಿವಾಟಿನ ವಿವರಗಳಲ್ಲಿನ ವ್ಯತ್ಯಾಸಗಳನ್ನು ಗಮನಿಸಿ.ನಕಲಿ ಆಪ್‌ಗಳು ಸಣ್ಣ ದೋಷಗಳು ಅಥವಾ ಅಸಮಂಜಸತೆ ಗಳನ್ನು ಹೊಂದಿರಬಹುದು, ಅದು ಹಗರಣದ ಬಗ್ಗೆ ನಿಮ್ಮನ್ನು ಎಚ್ಚರಿಸಬಹುದು.ಸರಿಯಾದ ಪರಿಶೀಲನೆಗೆ ಸಮಯಾವಕಾಶ ನೀಡದೆ ವಹಿವಾಟನ್ನು ಪೂರ್ಣಗೊಳಿಸಲು ನಿಮ್ಮನ್ನು ಆತುರಪಡಿಸುವ ವ್ಯಕ್ತಿಗಳ ಬಗ್ಗೆ ಎಚ್ಚರದಿಂದಿರಿ. ನಿಮ್ಮ ಪ್ರದೇಶದಲ್ಲಿ ಸಾಮಾನ್ಯವಾಗಿ ಬಳಸುವ ಅಧಿಕೃತ ಪಾವತಿ ಆಯಪ್‌ಗಳ ಬಗ್ಗೆ ತಿಳಿದುಕೊಳ್ಳಿ. ಯಾರಾದರೂ ಪರಿಚಯವಿಲ್ಲದ ಆಯಪ್ ಮೂಲಕ ಪಾವತಿಯನ್ನು ತೋರಿಸಿದರೆ, ಎಚ್ಚರಿಕೆಯಿಂದ ಮುಂದುವರಿಯಿರಿ.

ವ್ಯಾಪಾರಿಗಳು ನಕಲಿ ಪಾವತಿ ಪ್‌ಗಳ ಗುರಿಯಾಗುವುದು ಹೆಚ್ಚಾಗುತ್ತಿದೆ. ಬಿಡುವಿಲ್ಲದ ಸಮಯ, ಅಂಗಡಿಯಲ್ಲಿನ ಗದ್ದಲ ಅಥವಾ ವ್ಯಾಪಾರಿಯ ಗಮನ ಬೇರೆಡೆ ಇರುವ ಲಾಭವನ್ನು ವಂಚಕರು ಈ ನಕಲಿ ಪಾವತಿ ಆಪ್‌ಗಳ ಮೂಲಕ ಅವರನ್ನು ವಂಚಿಸಲು ಬಳಸಿಕೊಳ್ಳುತ್ತಾರೆ. ಈ ವಂಚನೆಯಿಂದಾಗಿ ವ್ಯಾಪಾರಿಯು ಸರಕು ಮತ್ತು ಸೇವೆಗಳನ್ನು ನೀಡಿ ನಷ್ಟ ಅನುಭವಿಸುವಂತಾಗುತ್ತದೆ.

ನಕಲಿ ಪಾವತಿ ಆಯಪ್‌ಗಳ ಮೂಲಕ ಆಗುವ ವಂಚನೆಗಳನ್ನು ತಡೆಯಲು ಸಹಾಯ ಮಾಡುವ ವ್ಯಾಪಾರಿಗಳಿಗಾಗಿ ಕೆಲವು ಸಲಹೆಗಳು ಇಲ್ಲಿವೆ:ನಿಮ್ಮ ಸಿಬ್ಬಂದಿಗೆ ಮಾಹಿತಿ ನೀಡಿ: ಎಲ್ಲಾ ಉದ್ಯೋಗಿಗಳಿಗೆ ಈ ವಂಚನೆಯ ಬಗ್ಗೆ ತಿಳಿದಿರಲಿ ಮತ್ತು ಮೋಸದ ವಹಿವಾಟುಗಳನ್ನು ಹೇಗೆ ಗುರುತಿಸುವುದು ಎಂದು ತಿಳಿದಿರಲಿ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE